# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 Volume - 01 | ಸಂಚಿಕೆ – 217 Issue - 217 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 Title- Code: KARKAN 28269 | ಚಿತ್ರದುರ್ಗ Chitradurga | ದಿನಾಂಕ: 15–03–2024 ಶುಕ್ರವಾರ Date: 15-03-2024 Friday | ಪುಟ: 4 Page: 4 | ಬೆಲೆ : ರೂ.2–00 Price: Rs. 2-00



ಒಳಪುಟದ ಸುದ್ದಿಗಳು

ಮತಗಟ್ಟೆಗಳ ಬದಲಾವಣೆ ಪ್ರಸ್ತಾವನೆ: ಜಿಲ್ಲಾದಿಕಾರಿ ವೆಂಕಟೇಶ್ 2

ನರೇಗಾದಡಿ ಕೆಲಸ ಕೊಡುತ್ತೇವೆ, ಯಾರೂ ಗುಳೇ ಹೋಗಬೇಡಿ ಜಿಪಂ ಸಿಇಒ 3

ಮಾತೃ ಹೃದಯಿ ಶ್ರೀಮತಿ ಡಾ.ಪ್ರಭಾ ಮಲ್ಲಿಕಾರ್ಜುನ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಲೋಕಸಭೆ ಚುನಾವಣೆ; ಅಧಿಕಾರಿ, ಸಿಬ್ಬಂದಿಗಳು ನಿಷ್ಪಕ್ಷಪಾತವಾಗಿ ಕಾರ್ಯ ನಿರ್ವಹಿಸಿ: ಜಿಲ್ಲಾಧಿಕಾರಿ

» ಚಿತ್ರದುರ್ಗ

ಸಾರ್ವತ್ರಿಕ ಲೋಕಸಭಾ ಚುನಾವಣೆಗೆ ಶೀಘ್ರವೇ ನೀತಿ ಸಂಹಿತೆ ಜಾರಿಯಾಗುವ ಸಾಧ್ಯತೆ ಇದ್ದು, ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿಗಳು ಮುಕ್ತ, ನ್ಯಾಯ ಸಮ್ಮತ ಚುನಾವಣೆಗಾಗಿ ನಿಸ್ಪಕ್ಷಪಾತವಾಗಿ ಕಾರ್ಯ ನಿರ್ವಹಿಸಲು ಸಜ್ಜಾಗುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಬುಧವಾರ ಲೋಕಸಭೆ ಚುನಾವಣೆ ಕುರಿತು ಜರುಗಿದ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿ ಸಭೆಯಲ್ಲಿ ಅವರು ಮಾತನಾಡಿದರು.

ನೀತಿ ಸಂಹಿತೆ ಜಾರಿಯಾದ ನಂತರ ಎಲ್ಲಾ ಅಧಿಕಾರಿ ಸಿಬ್ಬಂದಿ ಚುನಾವಣಾ ಆಯೋಗದ ಅಡಿ ಕಾರ್ಯ ನಿರ್ವಹಿಸಬೇಕು. ಚುನಾವಣೆ ಕೆಲಸಗಳಿಗೆ ಈಗಾಗಲೇ ತಂಡಗಳನ್ನು ರಚಿಸಿ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದೆ. ಆಯೋಗದ ಮಾರ್ಗದರ್ಶನ ಹಾಗೂ ಸಲಹೆ ಪಡೆದು ಕ್ರಮಬದ್ದವಾಗಿ ಕೆಲಸ ನಿರ್ವಹಿಸಬೇಕು.



ನೋಡಲ್ ಅಧಿಕಾರಿಗಳೊಂದಿಗೆ ಎಲ್ಲಾ ಸಿಬ್ಬಂದಿ ಕೈ ಜೋಡಿಸಬೇಕು. ಯಾವುದೇ ಅಕ್ರಮ, ಅವ್ಯವಹಾರಗಳಿಗೆ ಅವಕಾಶ ಮಾಡಿಕೊಡಬಾರದು. ಚುನಾವಣಾ ಆಯೋಗದ ಹೊಸ ನಿರ್ದೇಶನಗಳು ಹಾಗೂ ತೀರ್ಮಾನಗಳ ಬಗ್ಗೆ ರಾಜಕೀಯ ಪಕ್ಷಗಳಿಗೆ ಮಾಹಿತಿ ನೀಡಿ ಮನವರಿಕೆ ಮಾಡಿಕೊಡಬೇಕು. ಅಂಚೆ ಮತಪತ್ರಕ್ಕೆ ನಿರ್ವಹಣೆಗೆ ಹೆಚ್ಚಿನ ಮಹತ್ವ ನೀಡಬೇಕು. ಚುನಾವಣೆ ಅಕ್ರಮ ಅಥವಾ ಅವ್ಯವಹಾರಗಳು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ನೇರ ಹೊಣೆ ಮಾಡಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಸಿದರು. ಚುನಾವಣೆ ಕಾರ್ಯದ ನಡುವೆಯೂ ಸಾರ್ವಜನಿಕರ ಕುಂದು ಕೊರತೆಗಳನ್ನು ಪರಿಹರಿಸುವ ಕೆಲಸ ಮಾಡಬೇಕು. ಚುನಾವಣೆ ನೆಪ ಹೇಳಿ ದೈನಂದಿನ ಕೆಲಸ ಕಾರ್ಯಗಳ ಬಗ್ಗೆ ನಿರ್ಲಕ್ಷ್ಯ ಸಲ್ಲದು. ಸಾರ್ವಜನಿಕರೊಂದಿಗೆ ಸೌಮ್ಯದಿಂದ ವರ್ತಿಸಬೇಕು. ಬರ ಪರಿಸ್ಥಿತಿ ಇರುವುದರಿಂದ ಕುಡಿಯುವ ನೀರಿನ ಸಮಸ್ಯೆಯ ನಿವಾರಣೆಗೆ ಪ್ರಥಮಾದ್ಯತೆ ನೀಡಬೇಕಾಗುತ್ತದೆ. ಚುನಾವಣೆ ಸಮಯದಲ್ಲಿ 24 ಗಂಟೆಯೂ ಕೆಲಸ ಮಾಡಬೇಕಾಗುತ್ತದೆ. ಆರೋಗ್ಯದ ಕಡೆಗೂ ಗಮನವಿಟ್ಟು, ತಾಳ್ಮೆ ಹಾಗೂ ಶಾಂತಚಿತ್ತರಾಗಿ ಕೆಲಸ ನಿರ್ವಹಿಸಿ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿ, ಸಿಬ್ಬಂದಿಗೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ವಿವಿಧ ಶಾಖೆಗಳ ನೋಡಲ್ ಅಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಹಾಜರಿದ್ದರು.

## ಫಾಸ್ಟ್ ನ್ಯೂಸ್

### ಚುನಾವಣಾ ಘೋಷಣೆ ಮೊದಲೇ ಬಂಪರ್, ಪೆಟ್ರೋಲ್ ಡೀಸೆಲ್ ಬೆಲೆ ಇಳಿಸಿದ ಕೇಂದ್ರ!

» ನವದೆಹಲಿ

ಲೋಕಸಭಾ ಚುನಾವಣಾ ಕಾವು ಜೋರಾಗುತ್ತಿದೆ. ಚುನಾವಣಾ ಆಯೋಗ ಮತದಾನ ದಿನಾಂಕ ಘೋಷಣೆ ಮಾಡಲು ಸಜ್ಜಾಗಿದೆ. ದಿನಾಂಕ ಘೋಷಣೆಯಾದ ದಿನದಿಂದಲೇ ನೀತಿ ಸಂಹಿತಿ ಜಾರಿಯಾಗಲಿದೆ. ಇದೀಗ ಚುನಾವಣಾ ದಿನಾಂಕ ಘೋಷಣೆಗೂ ಮೊದಲೇ ಕೇಂದ್ರ ಸರ್ಕಾರ ಬಂಪರ್ ಕೊಡುಗೆ ನೀಡಿದೆ. ಇದೀಗ ಪೆಟ್ರೋಲ್ ಡೀಸೆಲ್ ಬೆಲೆಯನ್ನು ಕೇಂದ್ರ ಸರ್ಕಾರ ಕಡಿತಗೊಳಿಸಿದೆ. ಪ್ರತಿ ಲೀಟರ್ ಮೇಲೆ 2 ರೂಪಾಯಿ ಕಡಿತ ಮಾಡಲಾಗಿದೆ. ಪರಿಷ್ಕೃತ ದರ ನಾಳೆ(ಮಾ.15) ಬೆಳಗ್ಗೆ 6 ಗಂಟೆಯಿಂದ ಜಾರಿಯಾಗಲಿದೆ.ಮಹಿಳಾ ದಿನಾಚರಣೆಯಂದು ಪ್ರಧಾನಿ ಮೋದಿ ಎಲ್‌ಪಿಜಿ ಸಿಲಿಂಡರ್ ಬೆಲೆ 100 ರೂಪಾಯಿ ಕಡಿತ ಮಾಡಿದ್ದರು. ಇದೀಗ ಪೆಟ್ರೋಲ್ ಡೀಸೆಲ್ ಬೆಲೆ ಕಡಿತಗೊಳಿಸಲಾಗಿದೆ. ಇತ್ತೀಚೆಗೆ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಬೆಲೆ ಇಳಿಕೆಯಾಗಿತ್ತು. ಇದರ ಬೆನ್ನಲ್ಲೇ ಬೆಲೆ ಕಡಿತದ ಮಾತುಗಳು ಕೇಳಿಬಂದಿತ್ತು. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಎಲ್‌ಪಿಜಿ ಹಾಗೂ ಸಿಎನ್‌ಜಿ ಬೆಲೆಯಲ್ಲಿ ಕಡಿತವಾಗಿತ್ತು. ಇದೀಗ ಕೇಂದ್ರ ಸರ್ಕಾರ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯನ್ನೂ ಕಡಿತಗೊಳಿಸಿ ಮಹತ್ವದ ನಿರ್ಧಾರ ತೆಗೆದುಕೊಂಡಿದೆ. ಬೆಂಗಳೂರಿನಲ್ಲಿ ಇಂದಿನ ಪ್ರತಿ ಲೀಟರ್ ಪೆಟ್ರೋಲ್ ದರ 101.94 ರೂಪಾಯಿ ಹಾಗೂ ಡೀಸೆಲ್ ಬೆಲೆ 87.89 ರೂಪಾಯಿ. ನಾಳೆ ಬೆಳಗ್ಗೆಯಿಂದ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆಯಲ್ಲಿ 2 ರೂಪಾಯಿ ಇಳಿಕೆಯಾಗಲಿದೆ. ಪೆಟ್ರೋಲ್ ಬೆಲೆ 99.94 ರೂಪಾಯಿ ಹಾಗೂ ಡೀಸೆಲ್ ಬೆಲೆ 85.89 ರೂಪಾಯಿಗೆ ಇಳಿಕೆ ಆಗಲಿದೆ.

### KSRTC' ಮುಡಿಗೆ ಪ್ರತಿಷ್ಠಿತ 5 ರಾಷ್ಟ್ರೀಯ, 1 ಅಂತಾರಾಷ್ಟ್ರೀಯ ಪ್ರಶಸ್ತಿ

» ಬೆಂಗಳೂರು

ಕೆಎಸ್‌ಆರ್ಟಿಸಿಗೆ ಐದು ರಾಷ್ಟ್ರೀಯ ಮತ್ತು ಒಂದು ಅಂತಾರಾಷ್ಟ್ರೀಯ ಪ್ರಶಸ್ತಿಗಳು ಬಂದಿವೆ. ಬಸ್ ಬ್ರ್ಯಾಂಡ್ ನಿರ್ವಹಣೆಗಾಗಿ ದಕ್ಷಿಣ ಆಫ್ರಿಕಾ ನಾಯಕತ್ವ ಪ್ರಶಸ್ತಿ, ಮಾನವ ಸಂಪನ್ಮೂಲ ಉಪಕ್ರಮಕ್ಕಾಗಿ ಪಂಜಾಬ್ ನಾಯಕತ್ವ ಪ್ರಶಸ್ತಿ, ಅತ್ಯುತ್ತಮ ಗ್ರಾಹಕ ಸೇವಾ ಉಪಕ್ರಮಕ್ಕಾಗಿ ಸ್ಟಾರ್ ಆಫ್ ಎಕ್ಸಲೆನ್ಸ್ ಪ್ರಶಸ್ತಿ, ಮಾನವ ಸಂಪನ್ಮೂಲ ಅಭಿವೃದ್ಧಿಯಲ್ಲಿ ಸತತ ವಿನೂತನ ಉಪಕ್ರಮಗಳಿಗಾಗಿ ರಾಷ್ಟ್ರೀಯ ಅತ್ಯುತ್ತಮ ಉದ್ಯೋಗ ಬ್ರ್ಯಾಂಡ್ ಪ್ರಶಸ್ತಿ, ಮಾನವ ಸಂಪನ್ಮೂಲ ಉಪಕ್ರಮ ಸಾಧನೆಗಾಗಿ ಗೌವರ್ನೆನ್ಸ್ ನೌ 10ನೇ ಸಾರ್ವಜನಿಕ ಉದ್ದಿಮೆ ಪ್ರಶಸ್ತಿ ಮತ್ತು ಅತ್ಯುತ್ತಮ ವಿನೂತನ ವಾಹನ ಸಮೂಹ ನಿರ್ವಹಣೆಗಾಗಿ ಈಶಾನ್ಯ ಭಾರತ ನಾಯಕತ್ವ ಪ್ರಶಸ್ತಿಗೆ ಕೆಎಸ್‌ಆರ್ಟಿಸಿ ಆಯ್ಕೆಯಾಗಿದೆ ಎಂದು ನಿಗಮದ ವ್ಯವಸ್ಥಾಪಕ ನಿರ್ದೇಶಕ ವಿ.ಅನ್ಬುಕುಮಾರ್ ತಿಳಿಸಿದ್ದಾರೆ.

### ಯಶಸ್ವಿನಿ ನೊಂದಣಿ: ಮಾ.31 ರವರೆಗೆ ವಿಸ್ತರಣೆ

» ಚಿತ್ರದುರ್ಗ

2023–24ನೇ ಸಾಲಿಗೆ ಸಹಕಾರಿಗಳಿಗಾಗಿ ಯಶಸ್ವಿನಿ ಆರೋಗ್ಯ ರಕ್ಷಣಾ ಯೋಜನೆಯಡಿ ಹೊಸ ಸದಸ್ಯರನ್ನು ನೋಂದಾಯಿಸುವ ಅವಧಿಯನ್ನು ಮಾರ್ಚ್ 31ರ ವರೆಗೆ ವಿಸ್ತರಿಸಲಾಗಿದೆ. ಜಿಲ್ಲೆಯಲ್ಲಿ 2023–24ನೇ ಸಾಲಿಗೆ ಯಶಸ್ವಿನಿ ಸಹಕಾರ ಸದಸ್ಯರ ಆರೋಗ್ಯ ರಕ್ಷಣಾ ಯೋಜನೆಯು ಅನುಷ್ಠಾನಗೊಂಡಿದ್ದು, ಈ ಯೋಜನೆಯಡಿ ಸದಸ್ಯರನ್ನು ನೊಂದಾಯಿಸು ಪ್ರಕ್ರಿಯೆ ಈಗಾಗಲೇ ಪ್ರಾರಂಭವಾಗಿದೆ.

# ಅದ್ದೂರಿ ಶ್ರೀಚಳ್ಳಕೆರೆಯಮ್ಮ ಸಿಡಿ ಉತ್ಸವ





» ಚಳ್ಳಕೆರೆ

ಗ್ರಾಮ ದೇವತೆ ಶ್ರೀಚಳ್ಳಕೆರೆಯಮ್ಮ ದೇವಿ ಸಿಡಿ ಉತ್ಸವ ಸಾವಿರಾರು ಭಕ್ತರ ಸಮ್ಮುಖದಲ್ಲಿ ಗುರುವಾರ ಅದ್ದೂರಿಯಾಗಿ ನಡೆಯಿತು.

ಐದು ವರ್ಷಗಳಿಗೊಮ್ಮೆ ನಡೆಯುವ ಈ ಜಾತ್ರೆಗೆ ಕರ್ನಾಟಕವೂ ಸೇರಿದಂತೆ ನೆರೆಯ ಆಂದ್ರಪ್ರದೇಶದಿಂದಲ್ಲೂ ಸಾವಿರಾರು ಭಕ್ತರು ಸಿಡಿಉತ್ಸವದಲ್ಲಿ ಪಾಲ್ಗೊಂಡು ತಮ್ಮ ಹರಿಕೆ ತೀರಿಸಿದರು.

ಗುರುವಾರ ಮಧ್ಯಾಹ್ನ 3.30ಕ್ಕೆ ದೇವಿಯ ಪೂಜೆ ಮತ್ತು ಸಿಡಿ ಉತ್ಸವ ಆರಂಭವಾಯಿತು. ಸಿಡಿ ಉತ್ಸವದ ಮೆರವಣಿಗೆಯಲ್ಲಿ ಸುಮಾರು ನೂರಕ್ಕೂ ಹೆಚ್ಚು ಜೋಡೆತ್ತುಗಳು, ಮ್ಯಾಸಬೇಡರಪಡೆ, ಪೋತರಾಜರ ಹಾಗೂ ಮಹಿಳೆಯರ ಡೊಳ್ಳು ಕುಣಿತ ಕೀಲುಕುದುರೆ, ನಂದಿಕೋಲು, ಗೊಂಬೆಕುಣಿತ ಹಾಗೂ ಜಾನಪದ ಕಲಾತಂಡಗಳು ಸಿಡಿ ಉತ್ಸವದ ಮೆರವಣಿಗೆಯಲ್ಲಿ ಭಾಗವಹಿಸುವ ಮೂಲಕ ಮೆರಗು ನೀಡಿದವು. ದಾರಿಯುದ್ದಕ್ಕೂ ಹೆಜ್ಜೆ ಹೆಜ್ಜಗೂ ಭಕ್ತರು ಚಳ್ಳಕೆರೆಯಮ್ಮ ದೇವರಿಗೆ ಜೈಕಾರ ಹಾಕಿದರು. ದಾರಿಯುದ್ದಕ್ಕೂ ಸಿಡಿಯ ಅದ್ದೂರಿ ಮೆರವಣಿಗೆ ಸಾಗುತ್ತಿದ್ದು, ಬಾಯಾರಿದ



ಭಕ್ತರಿಗೆ ದಾನಿಗಳು ಮೊಸರನ್ನ, ಚಿತ್ರನ್ನ, ಮಜ್ಜಿಗೆ, ಪಾನಕ, ಕುಡಿಯುವ ನೀರು ನೀಡಿದರು.

ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಸಿಡಿ ಉತ್ಸವ ಮೆರವಣಿಗೆಗೆ ಚಾಲನೆ ನೀಡಿದರು ಉತ್ಸವ ನೆಹರೂ ವೃತ್ತದ ಮೂಲಕ ಬೆಂಗಳೂರು ರಸ್ತೆಯ ಬಸವೇಶ್ವರ ವೃತ್ತಕ್ಕೆ ತೆರಳಿತು. 3.30ಕ್ಕೆ ಆರಂಭವಾದ ಮೆರವಣಿಗೆ 5.30ಕ್ಕೆ ಮುಕ್ತಾಯವಾಯಿತು. ಶಾಸಕ ಟಿ.ರಘುಮೂರ್ತಿ ಮೆರವಣಿಗೆ ಯುದ್ದಕ್ಕೂ ಸಿಡಿ ಗಾಡಿಯ ಮೇಲೆ ನಿಂತು ಸಾಗಿದರು. ನೂರಾರು ಭಕ್ತರು ಸಿಡಿ ಏರಿ ತಮ್ಮ ಹರಿಕೆ ಈಡೇರಿಸಿದರು. ಮುಕ್ತಿ ಬಾವುಟವನ್ನು ಸುಧಾಕರ್ ಎಂಬುವವರ 25 ಸಾವಿರ ಹರಾಜಿನಲ್ಲಿ ಪಡೆದುಕೊಂಡರು. ಡಿವೈಎಸ್ಪಿ ರಾಜಣ್ಣ, ಠಾಣಾ ಇನ್ಸ್‌ಪೆಕ್ಟರ್ ಕೆ.ಕುಮಾರ್ ಸೂಕ್ತ ಬಂದೋಬಸ್ತ್ ಏರ್ಪಡಿಸಿದ್ದರು.

ಧರ್ಮದರ್ಶಿ ಪಿ.ಆರ್.ಗೌಡ್ರರಾಮಣ್ಣ, ದಳವಾಯಿಮೂರ್ತಿ,ಪಿ.ತಿಪ್ಪೇಸ್ವಾಮಿ,ಗೊಲ್ಲಗೌಡನಾಗಣ್ಣ, ತಳವಾರ ಈರಣ್ಣ, ದೊರೆಗಳಪ್ರಸನ್ನ, ದೇವಿಪ್ರಸಾದ್, ದಳವಾಯಿವೆಂಕಟೇಶ್, ಚಿಕ್ಕಣ್ಣಗೌಡ, ಬುಡ್ಡವೀರಣ್ಣ, ಮಜ್ಜಿಗೆವೀರೇಶ್, ಎಂ.ಬಿ.ಮಲ್ಲಪ್ಪ, ಮಡಿವಾಳರ ಧನಂಜಯ, ರುದ್ರಪ್ಪ, ಎನ್.ನಾಗರಾಜು, ಸೂರಪಾಪಣ್ಣ, ಮಲ್ಲಿಕಾರ್ಜುನಸ್ವಾಮಿ, ಸಿ.ಟಿ.ಶ್ರೀನಿವಾಸ್, ವೆಂಕಟೇಶ್, ಬಿ.ಟಿ.ರಮೇಶ್‌ಗೌಡ ಮುಂತಾದವರು ಉಪಸ್ಥಿತರಿದ್ದರು.

# ರೂ.3846 ಬೆಂಬಲ ಬೆಲೆಯಲ್ಲಿ ರಾಗಿ ಖರೀದಿ



» ದಾವಣಗೆರೆ

ಮುಂಗಾರು ಹಂಗಾಮಿನಲ್ಲಿ ರಾಗಿ ಬೆಳೆದ ರೈತರಿಂದ ನೇರವಾಗಿ ಬೆಂಬಲ ಬೆಲೆಯಲ್ಲಿ ರಾಗಿ ಖರೀದಿ ಮಾಡಲು ದಾವಣಗೆರೆ ನಗರದ ಎ.ಪಿ.ಎಂ.ಸಿ. ಗೋದಾಮಿನಲ್ಲಿ ರಾಗಿ ಖರೀದಿ ಕೇಂದ್ರಕ್ಕೆ ಗುರುವಾರ ಜಿಲ್ಲಾಧಿಕಾರಿ ಡಾ.ವೆಂಕಟೇಶ ಎಂ.ವಿ. ಚಾಲನೆ ನೀಡಿದರು. ಯಾವುದೇ ಮಧ್ಯವರ್ತಿಗಳಿಲ್ಲದೇ ನೇರವಾಗಿ ರೈತರಿಂದ ರಾಗಿಯನ್ನು ಪ್ರತಿ ಕ್ವಿಂಟಾಲ್ ರಾಗಿಗೆ ರೂ.3846 ಗಳ ಬೆಂಬಲ ಬೆಲೆಯಲ್ಲಿ ಖರೀದಿ ಮಾಡಲಾಗುತ್ತಿದೆ. ಜಿಲ್ಲೆಯಲ್ಲಿ ಇದುರೆಗೆ 1126 ರೈತರು ನೋಂದಾಯಿಸಿಕೊಂಡಿದ್ದು 43,868 ಕ್ವಿಂಟಾಲ್ ರಾಗಿ ಖರೀದಿಯಾಗುವ ನಿರೀಕ್ಷೆ ಇದೆ. ರಾಗಿ ಬೆಳೆದ ರೈತರು ಯಾವುದೇ ಮಧ್ಯವರ್ತಿಗಳಿಗೆ ರಾಗಿಯನ್ನು ನೀಡದೇ ನೇರವಾಗಿ ಖರೀದಿ ಕೇಂದ್ರಕ್ಕೆ ತರುವ ಮೂಲಕ ಬೆಂಬಲ ಬೆಲೆಯ ಲಾಭ ಪಡೆಯಬೇಕು.

ಖರೀದಿ ಕೇಂದ್ರದ ಸಿಬ್ಬಂದಿಗಳು ನಿಯಮಾನುಸಾರ ರೈತರಿಗೆ ತೊಂದರೆಯಾಗದಂತೆ ಕಾರ್ಯನಿರ್ವಹಿಸಲು ಹಾಗೂ ಎ.ಪಿ.ಎಂ.ಸಿ ಯವರು ಅಗತ್ಯ ಮೂಲಭೂತ ಸೌಲಭ್ಯಗಳನ್ನು ನೀಡುವಂತೆ ತಿಳಿಸಿದರು. ದಾವಣಗೆರೆ, ಹರಿಹರ, ಚನ್ನಗಿರಿ, ಹೊನ್ನಾಳಿ, ಜಗಳೂರು ತಾಲ್ಲೂಕುಗಳಲ್ಲಿ ರಾಗಿ ಖರೀದಿ ಕೇಂದ್ರ ಆರಂಭಿಸಲಾಗಿದ್ದು ಒಟ್ಟು 5 ಕೇಂದ್ರಗಳಲ್ಲಿ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಮೂಲಕ ಮಾರ್ಚ್ 31 ರ ವರೆಗೆ ಖರೀದಿ ಮಾಡಲಾಗುತ್ತಿದೆ. ರೈತರು ಕೇಂದ್ರಕ್ಕೆ ತರುವಾಗ ಎಫ್‌ಎಕ್ಯೂ ಮಾದರಿ ರಾಗಿ ಗುಣಮಟ್ಟ ಕಾಪಾಡಿಕೊಳ್ಳಬೇಕೆಂದು ತಿಳಿಸಿದರು. ಆಹಾರ ಮತ್ತು ನಾಗರಿಕ ಸಬರಬರಾಜು ಇಲಾಖೆ ಉಪನಿರ್ದೇಶಕ ಸಿದ್ದರಾಮ್ ಮರಿಹಾಳ್, ತಹಶೀಲ್ದಾರ್ ಡಾ; ಅಶ್ವಥ್ ಎಂ.ಬಿ ಹಾಗೂ ನಿಗಮದ ಅಧಿಕಾರಿಗಳು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಬಿಸಿಲಿನ ತಾಪಕ್ಕೆ ಬಹುಪಯೋಗಿ ಎಳನೀರಿಗೆ ಮೊರೆ ಹೋಗುತ್ತಿರುವ ಜನ

» ಮಹದೇವಪುರ ಶಿವಮೂರ್ತಿ.

ಪರಶುರಾಂಪುರ: ಚಳ್ಳಕೆರೆ ತಾಲೂಕು ರಾಜ್ಯದಲ್ಲಿ ಅತಿ ಕಡಿಮೆ ಮಳೆಯಾಗುವ ಪ್ರದೇಶವಾಗಿದ್ದು, ಬರಗಾಲ ಇರುವ ಪರಿಣಾಮ ಬಿಸಿಲಿನ ತಾಪಮಾನ ಸು 35 ರಿಂದ 40 ಸೆಲ್ಸಿಯಸ್ ಅಷ್ಟು ತಾಪಮಾನ ಹೆಚ್ಚಾಗುತ್ತಿತ್ತು,ಧಗೆ ತಣಿಸಲು ಜನತೆ ಎಳೆನೀರಿಗೆ ಜತೆ ತಂಪು ಪಾನೀಯಗಳ ಮೊರೆ ಹೋಗುತ್ತಿದ್ದಾರೆ.

ಸಾರ್ವಜನಿಕರು ಬೇರೆ ಜ್ಯೂಸ್ ಕುಡಿದು ದಣಿವಾರಿಸಿಕೊಳ್ಳುವ ಬದಲು ಸುಲಭವಾಗಿ ಸಿಗುವ ಎಳನೀರು ಕುಡಿದು ಕೂಲ್ ಆಗುತ್ತಿದ್ದಾರೆ.ಸದ್ಯ ಇಳೆ ನೊಡದ ಮಳೆಯಿಂದ ಎಳನೀರಿನ ಬೆಲೆಯು ಸಹಾ ಹೆಚ್ಚಾಗಿದೆ.ಜನಸಾಮಾನ್ಯರಿಗೆ ಸುಲಭದ ದರದಲ್ಲಿ ಕೈಗೆ ಎಡುಕುತ್ತಿದ್ದ ಎಳೆ ನೀರಿನ ಇದೀಗ ಮಾರುಕಟ್ಟೆಯಲ್ಲಿ ದುಬಾರಿಯಾಗಿವೆ.ಒಂದಕ್ಕೆ ಮಾರುಕಟ್ಟೆಯಲ್ಲಿ 30 ರಿಂದ 50 ರೂ ಇದೆ.




ಉತ್ತಮ ಆರೋಗ್ಯ :ಲವಣಾಂಶಗಳನ್ನೊಳಗೊಂಡ ಸಮೃದ್ಧ ಪೇಯ ಎಳನೀರು.ಇದರಲ್ಲಿ ಹೆಚ್ಚಿನ ಪೊಟಾಷಿಯಂ ಇರುವ ಕಾರಣ ಹೈಪರ್ ಟೆನ್ಷನ್ ಕಡಿಮೆ ಕಡಿಮೆ ಮಾಡಲು ಸಹಕಾರಿ. ಇದು ಕೊಲೆಸ್ಟ್ರಾಲ್ ನಾಶ ಮಾಡುತ್ತದೆ .ಇನ್ನು ಎಳನೀರನ್ನ ಖಾಲಿ ಹೊಟ್ಟೆಗೆ ತೆಗೆದುಕೊಳ್ಳುವುದರಿಂದ ದೇಹದ ಅಂಗಾಂಗಳು ಕೂಲ್ ಆಗಿ,ಎಸಿಡಿಟಿ ಸಮಸ್ಯೆ ನಿವಾರಣೆಯಾಗುತ್ತದೆ. ಈ ಕಾರಣಕ್ಕಾಗಿಯೇ ಹಲವರು ಕೂಡ ರೋಗಿಗಳ ಜತೆ ಇನ್ನಿತತರಿಗೂ ಎಳ ನೀರು ಕುಡಿಯುವಂತೆ ಸಲಹೆ ನೀಡುತ್ತಿರುವುದನ್ನ ಕಾಣಬಹುದು.

ಸಾಮಾಜಿಕ ಜಾಣದಲ್ಲಿ ಎಳನೀರಿನ ಮಹತ್ವ : ಎಲ್ಲರ ಕೈಯಲ್ಲಿ ಮೊಬೈಲ್ ಇರುವ ಕಾರಣ ನೈಸರ್ಗಿ ಉಪಯೋಗ ಆರೋಗ್ಯ , ಸೌಂದರ್ಯ, ಹತ್ತಾರು ಖಾಯಿಲೆಗಳಿಗೆ ರಾಮ ಬಾಣದಂತಿರು ಎಳ ನೀರಿನ ಮಾಹಿತಿ ಮತ್ತು ಆರೋಗ್ಯಕ್ಕೆ ಸಂಬಂಧಿಸಿದವುಗಳು ಬಂದರೆ ಸಾಕು ಎಲ್ಲರಿಗೂ ಕ್ಷಣಾರ್ಧದಲ್ಲಿ ಷೇರಾಗುವುದು .


ಪುಟ 2

## ಫಾಸ್ಟ್ ನ್ಯೂಸ್

### ನ್ಯಾಯಾಲಯದಲ್ಲಿಂದು ಮಹಿಳಾ ದಿನಾಚರಣೆ

» **ದಾವಣಗೆರೆ**

ಜಿಲ್ಲಾ ವಕೀಲರ ಸಂಘದ ದಾವಣಗೆರೆ ವತಿಯಿಂದ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿನ ವಕೀಲರ ಸಾಂಸ್ಕೃತಿಕ ಭವನದಲ್ಲಿ 15ರ ಬೆಳಿಗ್ಗೆ 12 ಗಂಟೆಗೆ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ನೆರವೇರಿಸುವರು. ಅಧ್ಯಕ್ಷತೆಯನ್ನು ವಕೀಲರ ಸಂಘದ ಅಧ್ಯಕ್ಷ ಎಲ್. ಹೆಚ್.ಅರುಣಕುಮಾರ ವಹಿಸುವರು. ಮುಖ್ಯ ಅತಿಥಿಗಳಾಗಿ ದಾವಣಗೆರೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು ಎಸ್.ಬಳ್ಳಾರಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಧಿಕಾರಿ ವಾಸಂತಿ ಉಪ್ಪಾರ, ಭೂದಾಖಲೆಗಳ ಸಹಾಯಕ ನಿರ್ದೇಶಕಿ ಭಾವನಾ ಬಸವರಾಜ್, ಉಪವಿಭಾಗಾಧಿಕಾರಿ ದುರ್ಗಾಶ್ರೀ, ಮಹಾನಗರ ಪಾಲಿಕೆ ಆಯುಕ್ತೆ ರೇಣುಕಾ ಸೇರಿದದಂತೆ ಎಲ್ಲಾ ನ್ಯಾಯಾಲಯಗಳ ನ್ಯಾಯಾಧೀಶರು ಭಾಗವಹಿಸಲಿದ್ದಾರೆ ಎಂದು ವಕೀಲರ ಸಂಘದ ಪರವಾಗಿ ಉಪಾಧ್ಯಕ್ಷ ಜಿ.ಕೆ.ಬಸವರಾಜ್ ಗೋಪನಾಳು, ಕಾರ್ಯದರ್ಶಿ ಎಸ್.ಬಸವರಾಜು, ಸಹ ಕಾರ್ಯದರ್ಶಿ ಎ.ಎಸ್.ಮಂಜುನಾಥ್ ತಿಳಿಸಿದ್ದಾರೆ.

### ಬಿಸಿಲಿನ ತಾಪಕ್ಕೆ ಬಹುಪಯೋಗಿ ಎಳನೀರಿಗೆ ಮೊರೆ ಹೋಗುತ್ತಿರುವ ಜನ

» **ಮೊದಲ ಪುಟದಿಂದ**

ಇದಲ್ಲದೆ ಕೆಲವರು ವಾಟ್ಸಪ್ ಇಮೇಜ್, ಸ್ಟೇಟಸ್, ವಾಲಪೇಪರ್ ಇಟ್ಟುಕೊಳ್ಳುವರು.ಹಲವರು ಬಿಡುವುವಿನ ಸಮಯದಲ್ಲಿ ತಮ್ಮ ಇಲ್ಲವೆ ಸ್ನೇಹಿತರ ಇಲ್ಲವೆ ಕೊಂಡು ಕುಡಿಯುವಾಗ ಎಳ ನೀರು ಕುಡಿಯುವಾಗ ಸೆಲ್ಫಿ ತೆಗೆದುಕೊಳ್ಳುತ್ತಿದ್ದಾರೆ. ಈ ಬಾರಿ ಕನಿಷ್ಠ 31 ರಿಂದ 40 ಡಿಗ್ರಿ ಸೆಲ್ಸಿಯಸ್ ನಡುವೆ ಅಂತರದಲ್ಲಿ ತಾಪಮಾನವಿದೆ.ಹಿಗಾಗಿ ಎಳನೀರಿಗೆ ಸಹಜವಾಗಿ ಬೇಡಿಕೆ ಹೆಚ್ಚಾಗಿದೆ . ಗ್ರಾಹಕರ ಡಿಮ್ಯಾಂಡ್ ಪೂರೈಸಲು ನೆರೆ ಆಂಧ್ರ ಸೇರಿದಂತೆ ವಿವಿಧೆಡೆಯಿದಿಂದಲೂ ತರಿಸಿಕೊಳ್ಳಲಾಗುತ್ತಿದೆ.

### ಈ. ವಿಶಾಲ ಅವರಿಗೆ ಪಿಹೆಚ್‌ಡಿ ಪದವಿ

» **ಚಿತ್ರದುರ್ಗ**



ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲ್ಲೂಕಿನ ಹಳೇಕುಂದೂರು ಗ್ರಾಮದ ಮಹೇಶ್ವರಮ್ಮ ಹಾಗೂ ನಿವೃತ್ತ ಶಿಕ್ಷಕ ಕೆ.ಈಶ್ವರಪ್ಪ ಅವರ ಪುತ್ರಿ ಈ.ವಿಶಾಲ ಅವರಿಗೆ ಜೀವ ರಾಸಾಯನಶಾಸ್ತ್ರ ವಿಷಯದಲ್ಲಿ ಈಚೆಗೆ ನಡೆದ ದಾವಣಗೆರೆ ವಿಶ್ವವಿದ್ಯಾನಿಲಯದ ಘಟಿಕೋತ್ಸವದಲ್ಲಿ ಪಿಹೆಚ್‌ಡಿ ಪದವಿ ಪ್ರಧಾನ ಮಾಡಲಾಯಿತು. ಜೀವ ರಾಸಾಯನಶಾಸ್ತ್ರ ವಿಭಾಗದ ಪ್ರೊ. ವಡ್ಲಪುಡಿ ಕುಮಾರ್ ಹಾಗೂ ಆಹಾರ ತಂತ್ರಜ್ಞಾನ ವಿಭಾಗದ ಡಾ.ಪೂರ್ಣಿಮಾ ಅವರ ಮಾರ್ಗದರ್ಶನದಲ್ಲಿ " In vitro Plant regeneration and Production of Terpenoids and Saponins in cell and Tissue Culture of Gnidia Glauca (Fresen) Gilg" ವಿಷಯದಲ್ಲಿ ನಡೆಸಿದ ಸಂಶೋಧನಾ ಕಾರ್ಯಕ್ಕೆ ಜೀವರಸಾಯನ ಶಾಸ್ತ್ರದಲ್ಲಿ ಪಿಹೆಚ್‌ಡಿ ಲಭಿಸಿದೆ.

### ಮೀನುಗಾರಿಕೆ ಸಲಕರಣೆ ಕಿಟ್: ಅರ್ಜಿ ಆಹ್ವಾನ

» **ಚಿತ್ರದುರ್ಗ**

ಜಿಲ್ಲೆಯ ಹೊಳಲ್ಕೆರೆ ಹಾಗೂ ಹೊಸದುರ್ಗ ತಾಲ್ಲೂಕಿಗೆ ಸಂಬಂಧಿಸಿದಂತೆ ಗಣಿಬಾಧಿತ ಜಿಲ್ಲೆಗಳ ಸಮಗ್ರ ಅಭಿವೃದ್ಧಿ ಯೋಜನೆಯಡಿ (ಅಇಕಒಖಚ) 2023-24 ನೇ ಸಾಲಿಗೆ ಸಂಬಂಧಿಸಿದಂತೆ ಮೀನುಗಾರಿಕೆ ಇಲಾಖೆ ವತಿಯಿಂದ ಅರ್ಹ ಫಲಾನುಭವಿಗಳಿಗೆ ಶೇ.100ರಷ್ಟು ಸಹಾಯಧನದಲ್ಲಿ ಮೀನುಗಾರಿಕೆ ಸಲಕರಣೆ ಯೋಜನೆಯಡಿ ಆಸಕ್ತ ಮೀನುಗಾರ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಏಪ್ರಿಲ್ 20 ಕೊನೆ ದಿನವಾಗಿದೆ. ಈ ಯೋಜನೆಗೆ ಹೊಳಲ್ಕೆರೆ ತಾಲ್ಲೂಕಿನ ತನಿಗೇನಹಳ್ಳಿ, ಹಿರೇಕಂದವಾಡಿ, ಮುತ್ತುಗದೂರು, ಕಾಗಳಕೆರೆ, ಬಿ.ದುರ್ಗ, ಸಾಸಲು, ಗಂಜಿಗಟ್ಟೆ, ಊದಿಗೆರೆ, ಹೊರಕೆರೆನಹಳ್ಳಿ, ತ್ಯಾಗನಹಳ್ಳಿ,ಶಾನಬೋಗನಹಳ್ಳಿ ಗ್ರಾಮಗಳು ಹಾಗೂ ಹೊಸದುರ್ಗ ತಾಲ್ಲೂಕಿನ ದೊಡ್ಡಬ್ಯಾಲದಕೆರೆ, ಚಿಕ್ಕಬ್ಯಾಲದಕೆರೆ,ಬ್ಯಾಡರಹಳ್ಳಿ,ಜಯಸುವರ್ಣಪುರ, ಕಿಟ್ಟದಾಳ್, ನಾಗನಾಯಕನಕಟ್ಟೆ, ಮುಗುಲೋಡು, ಕಂಚೀಪುರ, ಲಕ್ಕಿಹಳ್ಳಿ, ಸಂಪನಾಯಕನಹಳ್ಳಿ, ಹನುಮನಹಳ್ಳಿ, ದೊಡ್ಡಕಿಟ್ಟದಾಳ್, ನಾಕಿಕೆರೆ, ಮಾಡದಕೆರೆ, ವೀರವ್ವನಾಗ್ತಿಹಳ್ಳಿ, ಶೀರನಕಟ್ಟೆ, ಬಂಡಿಹಳ್ಳಿ, ಸಣ್ಣಕಿಟ್ಟದಾಳ್ ಮತ್ತು ಕಂಚಿಹಳ್ಳಿ ಗ್ರಾಮಗಳಿಗೆ ಸಂಬಂಧಿಸಿದ ಸಾರ್ವಜನಿಕರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಹೆಚ್ಚಿನ ಮಾಹಿತಿಗಾಗಿ ಹೊಸದುರ್ಗ ಮತ್ತು ಹೊಳಲ್ಕೆರೆ ತಾಲ್ಲೂಕಿನ ಮೀನಿಗಾರಿಕೆ ಸಹಾಯಕ ನಿರ್ದೇಶಕರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿಯನ್ನು ಪಡೆಯಬಹುದು ಎಂದು ಹೊಸದುರ್ಗ ಮೀನುಗಾರಿಕೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ರಾಜಕೀಯ ಪಕ್ಷಗಳ ಗಮನಕ್ಕೆ ತಂದು ಆಯೋಗದ ಅನುಮೋದನೆಗೆ ಸಲ್ಲಿಕೆ: ಜಿಲ್ಲಾಧಿಕಾರಿ**

# ಮತಗಟ್ಟೆಗಳ ಬದಲಾವಣೆ ಪ್ರಸ್ತಾವನೆ

» **ಚಿತ್ರದುರ್ಗ**

ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ಸಂಬಂಧ ಮತದಾನ ಕೇಂದ್ರಗಳ ಹೆಸರು ಹಾಗೂ ವಿಳಾಸ ಬದಲಾವಣೆ ಪ್ರಸ್ತಾವನೆಗೆ ಭಾರತ ಚುನಾವಣಾ ಆಯೋಗದ ಅನುಮೋದನೆ ಪಡೆಯುವ ಕುರಿತು ಬುಧವಾರ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧ್ಯಕ್ಷತೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಮುಖಂಡರ ಸಭೆಯ ನಡೆಸಲಾಯಿತು.

ಚುನಾವಣಾ ಆಯೋಗದ ನಿಯಮಾನುಸಾರ ಮತಗಟ್ಟೆಗಳ ಹೆಸರು ಬದಲಾವಣೆ ಪ್ರಸ್ತಾವನೆಗಳಿದ್ದಲ್ಲಿ ಜಿಲ್ಲಾ ಚುನಾವಣಾಧಿಕಾರಿಗಳು ಅಂತಹ ಮತದಾನ ಕೇಂದ್ರಗಳ ಪಟ್ಟಿಯನ್ನು ರಾಜಕೀಯ ಪಕ್ಷಗಳ ಗಮನಕ್ಕೆ ತಂದು ಭಾರತ ಚುನಾವಣಾ ಆಯೋಗದ ಅನುಮೋದನೆಗೆ ಸಲ್ಲಿಸಬೇಕಿರುತ್ತದೆ. ಅದರಂತೆ ಚಿತ್ರದುರ್ಗ ಜಿಲ್ಲೆಗೆ ಸಂಬಂಧಿಸಿದ ಮತಗಟ್ಟೆಗಳ ಪಟ್ಟಿಯನ್ನು ಹಾಜರಿದ್ದ ಎಲ್ಲಾ ರಾಜಕೀಯ ಪಕ್ಷಗಳ ಗಮನಕ್ಕೆ ತರಲಾಯಿತು. ಅಸ್ತಿತ್ವದಲ್ಲಿರುವ ಮತಗಟ್ಟೆಗಳ ಹೆಸರು ಹಾಗೂ ವಿಳಾಸ ಬದಲಾವಣೆಗೆ ಪ್ರಸ್ತಾಪಿತ ಮತಗಟ್ಟೆಗಳ ಹೆಸರುಗಳ ಪಟ್ಟಿಯನ್ನು ರಾಜಕೀಯ ಪಕ್ಷಗಳ ಗಮನಕ್ಕೆ ತರಲಾಯಿತು.



ಚಳ್ಳಕೆರೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 4 ಮತಗಟ್ಟೆಗಳ ಸ್ಥಳ ಹಾಗೂ ಹೆಸರು ಬದಲಾವಣೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಮತಗಟ್ಟೆ ಸಂಖ್ಯೆ 217ರ ಸರ್ಕಾರಿ ಪ್ರೌಢಶಾಲೆ, ಪಿ.ಮಹದೇವಪುರ-1 (ರೂಂ ನಂ-1) ಮತಗಟ್ಟೆಯನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಪಿ.ಮಹದೇವಪುರ-1 (ರೂಂ-1)ಗೆ ಬದಲಾವಣೆ ಮಾಡಲಾಗಿದೆ. ಮತಗಟ್ಟೆ ಸಂಖ್ಯೆ 224 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಓಬಳಾಪುರದಿಂದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಓಬಳಾಪುರಕ್ಕೆಬದಲಾವಣೆಮಾಡಲಾಗಿದೆ. ಮತಗಟ್ಟೆ ಸಂಖ್ಯೆ-225 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ,. ರೂಂ.-1, ತಿಮ್ಮಣ್ಣನಾಯಕನಕೋಟೆ (ಟಿ.ಎನ್. ಕೋಟೆ)ಯಿಂದ ಸರ್ಕಾರಿ ಪ್ರೌಢಶಾಲೆ, ರೂಂ-1, ತಿಮ್ಮಣ್ಣನಾಯಕನಕೋಟೆ (ಟಿ.ಎನ್.ಕೋಟೆ)ಗೆ ಬದಲಾವಣೆ ಮಾಡಲಾಗಿದೆ. ಮತಗಟ್ಟೆ ಸಂಖ್ಯೆ 226 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ರೂಂ-2 ತಿಮ್ಮಣ್ಣನಾಯಕನಕೋಟೆ (ಟಿ.ಎನ್.ಕೋಟೆ)ಯಿಂದ ಸರ್ಕಾರಿ ಪಿಯು ಕಾಲೇಜು, ರೂಂ-2, ತಿಮ್ಮಣ್ಣನಾಯಕನಕೋಟೆ (ಟಿ.ಎನ್. ಕೋಟೆ)ಗೆ ಬದಲಾವಣೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 2 ಮತಗಟ್ಟೆಗಳ ಸ್ಥಳ ಹಾಗೂ ಹೆಸರು ಬದಲಾವಣೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಮತಗಟ್ಟೆ ಸಂಖ್ಯೆ 39 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ರೂಂ-1, ಸಿದ್ದವ್ವನಹಳ್ಳಿಯಿಂದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ರೂಂ-1, ವಡ್ಡರಸಿದ್ದವ್ವನಹಳ್ಳಿಗೆ ಬದಲಾವಣೆ ಮಾಡಲಾಗಿದೆ. ಮತಗಟ್ಟೆ ಸಂಖ್ಯೆ 40 ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ರೂಂ-2, ಸಿದ್ದವ್ವನಹಳ್ಳಿಯಿಂದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ರೂಂ-2, ವಡ್ಡರಸಿದ್ದವ್ವನಹಳ್ಳಿಗೆ ಬದಲಾವಣೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಜಿಲ್ಲೆಯ ಮೊಳಕಾಲ್ಮುರು ವಿಧಾನಸಭಾ ಕ್ಷೇತ್ರದಲ್ಲಿ 285 ಮತಗಟ್ಟೆಗಳು, ಚಳ್ಳಕೆರೆ-260, ಚಿತ್ರದುರ್ಗ-288, ಹಿರಿಯೂರು-287, ಹೊಸದುರ್ಗ-242 ಹಾಗೂ ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದಲ್ಲಿ 299 ಮತಗಟ್ಟೆಗಳು ಸೇರಿದಂತೆ ಜಿಲ್ಲೆಯ ಆರು ವಿಧಾನಸಭಾ ಕ್ಷೇತ್ರಗಳಿಂದ ಒಟ್ಟು 1661 ಮತಗಟ್ಟೆಗಳು ಇವೆ. ರಾಜಕೀಯ ಪಕ್ಷಗಳೊಂದಿಗೆ ಸಮಾಲೋಚನೆ ನಡೆಸಿದ ನಂತರ ಮತಗಟ್ಟೆಗಳ ಹೆಸರು ಬದಲಾವಣೆಯ ಪ್ರಸ್ತಾವನೆಗಳನ್ನು ಸಮುಚಿತ ಮಾರ್ಗದ ಮೂಲಕ ಭಾರತ ಚುನಾವಣಾ ಆಯೋಗಕ್ಕೆ ಅನುಮೋದನೆಗಾಗಿ ಸಲ್ಲಿಸಲು ಸಭೆಯಲ್ಲಿ ನಿರ್ಧರಿಸಲಾಯಿತು. ಸಭೆಯಲ್ಲಿ ಉಪವಿಭಾಗಾಧಿಕಾರಿ ಎಂ.ಕಾರ್ತೀಕ್, ಜಿಲ್ಲಾ ಜೆಡಿಎಸ್ ಮಹಾ ಪ್ರಧಾನ ಕಾರ್ಯದರ್ಶಿ ಡಿ.ಗೋಪಾಲಸ್ವಾಮಿ ನಾಯಕ, ಸಿಪಿಐ ಡಿಒಸಿ ಸಿ.ಕೆ.ಗೌಸ್‌ಪೀರ್, ಜಿಲ್ಲಾ ಕಾಂಗ್ರೆಸ್ ಸಮಿತಿ ಕಾರ್ಯದರ್ಶಿ ಸಿ.ಜೆ.ನಾಸಿರುದ್ದೀನ್, ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಹೆಚ್.ಬಿ.ನರೇಂದ್ರ, ಬಿಎಸ್‌ಪಿ ಜಿಲ್ಲಾ ಸಂಯೋಜಕ ಹೆಚ್. ಎನ್.ಶಿವಮೂರ್ತಿ ಸೇರಿದಂತೆ ಚುನಾವಣಾ ಸಿಬ್ಬಂದಿ ಇದ್ದರು.

## ಚಿಕಿತ್ಸೆಗೆ ಬರುವ ರೋಗಿಗಳನ್ನು ಪ್ರೀತಿಯಿಂದ ಕಾಣಬೇಕು: ಶಾಸಕ ಬಿ.ಜಿ ಗೋವಿಂದಪ್ಪ ಸಲಹೆ

» **ಹೊಸದುರ್ಗ**

ವಿವಿಧ ರೋಗಗಳ ಸಮಸ್ಯೆಯಿಂದ ಆಸ್ಪತ್ರೆಗೆ ಬರುವ ರೋಗಿಗಳನ್ನು ವೈದ್ಯರು ಪ್ರೀತಿಯಿಂದ ಕಾಣಬೇಕು. ಆತ್ಮೀಯತೆಯಿಂದ ಮಾತನಾಡಿಸಿ, ಅವರಿಗೆ ಆತ್ಮಸ್ಥೈರ್ಯ ತುಂಬುವಂತಾಗಬೇಕು. ಆಗ ಆಸ್ಪತ್ರೆ, ವೈದ್ಯರು ಹಾಗೂ ತಾಲ್ಲೂಕಿಗೆ ಉತ್ತಮ ಹೆಸರು ಬರುತ್ತದೆ ಎಂದು ಶಾಸಕ ಬಿ.ಜಿ ಗೋವಿಂದಪ್ಪ ಸಲಹೆ ನೀಡಿದರು.

ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ನವೀಕರಿಸಿದ ಡಯಾಲಿಸಿಸ್ ಘಟಕ ಉದ್ಘಾಟಿಸಿ ಮಾತನಾಡಿದರು.

ಶಾಸಕನಾಗಿ ಬಂದ ನಂತರ ಇಲ್ಲಿನ ಜನರ ಮೊದಲ ಬೇಡಿಕೆ ಡಯಾಲಿಸಿಸ್ ಘಟಕವಾಗಿತ್ತು, ಹಾಗಾಗಿ ಸಂಬಂಧಪಟ್ಟವರ ಬಳಿ ಚರ್ಚಿಸಿ, ಡಯಾಲಿಸಿಸ್ ಘಟಕ ಕಲ್ಪಿಸಲಾಗಿದೆ. ಇದರಿಂದ ಡಯಾಲಿಸಿಸ್‌ಗಾಗಿ ಚಿತ್ರದುರ್ಗ, ಶಿವಮೊಗ್ಗ, ಚಿಕ್ಕಮಗಳೂರು, ದಾವಣಗೆರೆ ಸೇರಿದಂತೆ ದೂರ ದೂರಿಗೆ ಹೋಗುವ ಜನರ ಸಮಯ ಹಾಗೂ ವೆಚ್ಚ ತಗ್ಗಿದಂತಾಗಿದೆ. ಆರೋಗ್ಯ ಇಲಾಖೆ ಸಿಬ್ಬಂದಿಗಳು ತುಂಬಾ ವ್ಯವಸ್ಥಿತವಾಗಿ ಕಾರ್ಯನಿರ್ವಹಿಸಬೇಕು. ಬಡಜನರಿಗೆ ಉತ್ತಮ ಸೇವೆ ನೀಡಬೇಕು. ದಿನಕ್ಕೆ 12 ರೋಗಿಗಳಿಗೆ ಡಯಾಲಿಸಿಸ್ ಮಾಡಬಹುದೆಂಬು ವೈದ್ಯರು ತಿಳಿಸಿದ್ದಾರೆ. ಅದರಂತೆ ಉತ್ತಮವಾಗಿ ಕಾರ್ಯನಿರ್ವಹಿಸಿ. ಜನಮೆಚ್ಚುಗೆ ಗಳಿಸಬೇಕು. ಸಿಬ್ಬಂದಿಗಳು ಮೇಲು ಕೀಳು ಭಾವನೆ ತೊರೆದು ಪರಸ್ಪರ ಸಹಕಾರ ಮನೋಭಾವದಿಂದ ಕೆಲಸ ಮಾಡಿ ಎಂದು ಕಿವಿಮಾತು ಹೇಳಿದರು.



ಹೆಚ್ಚು ಜನರು ಅನಾರೋಗ್ಯಕ್ಕೆ ತುತ್ತಾಗುವುದು ಮಧ್ಯಪಾನ ಸೇವನೆಯಿಂದ. ಮಧ್ಯಪಾನ ಸೇವನೆ ನಿಲ್ಲಿಸಬೇಕು. ಉತ್ತಮ ಆರೋಗ್ಯ ಸಂಪಾದಿಸಬೇಕು. ಕೆಲವು ದುರಭ್ಯಾಸಗಳಿಂದ ದೂರವಿರಲು, ಮನಸ್ಸಿನಲ್ಲಿ ಗಟ್ಟಿ ನಿರ್ಧಾರ ಕೈಗೊಳ್ಳಬೇಕು. ಅದೊಂದು ತಪಸ್ಸಿದಂತೆ ಎಂದರು.

ಈ ಸಂಧರ್ಬದಲ್ಲಿ ಸಾರ್ವಜನಿಕ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿ ಡಾ. ಸಂಜಯ್, ಕಾಂಗ್ರೆಸ್ ನಗರ ಘಟಕದ ಅಧ್ಯಕ್ಷ ಆಗ್ರೋ ಶಿವಣ್ಣ, ಪುರಸಭೆ ಮುಖ್ಯಾಧಿಕಾರಿ ಜಿ.ವಿ.ತಿಮ್ಮರಾಜು, ಪುರಸಭೆ ಸದಸ್ಯರುಗಳಾದ ಜಾಫರ್ ಸಾಧಿಕ್, ಶಂಕ್ರಪ್ಪ, ಸಂತೋಷ್, ಮುಖಂಡರುಗಳಾದ ರಾಜಣ್ಣ, ಕೆ.ಸಿ. ನಿಂಗಪ್ಪ, ಶ್ರೀಮತಿವಿಜಯಲಕ್ಷ್ಮಿ, ದೀಪಿಕಾ ಸತೀಶ್, ವೆಂಕಟೇಶ್ ದಳವಾಯಿ, ಮು ದ್ದಣ್ಣ ಸೇರಿದಂತೆ ಆರೋಗ್ಯ ರಕ್ಷಾ ಸಮಿತಿ ಸದಸ್ಯರುಗಳು ಸೇರಿದಂತೆ ಹಲವರಿದ್ದರು.

## ಶ್ರೀಪಾತಲಿಂಗೇಶ್ವರಸ್ವಾಮಿ ಜಾತ್ರೆಗೆ ಭರದಸಿದ್ಧತೆ

**ದೇವಸ್ಥಾನದ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನದ ಬೇಡಿಕೆ: ಆರ್.ಮಲ್ಲಯ್ಯ.**



» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ತಾಲ್ಲೂಕಿನ ಪರಶುರಾಮಪುರ ಹೋಬಳಿಯಚನ್ನಮ್ಮನಾಗತಿಹಳ್ಳಿಗ್ರಾಮದಶ್ರೀಪಾತಲಿಂಗೇಶ್ವರಸ್ವಾಮಿಯ ಜಾತ್ರೆ ಮಾರ್ಚ್ 16,17 ಎರಡು ದಿನಗಳ ಕಾಲ ನಡೆಸಲು ತೀರ್ಮಾನಿಸಲಾಗಿದೆ ಎಂದು ಜಾತ್ರಾ ಉತ್ಸವ ಸಮಿತಿ ಅಧ್ಯಕ್ಷ ಆರ್. ಮಲ್ಲಯ್ಯ ತಿಳಿಸಿದ್ದಾರೆ.

ಅವರು, ನಗರದ ಪ್ರವಾಸಿಮಂದಿರದಲ್ಲಿ ಗುರುವಾರ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕಳೆದ ಸುಮಾರು ಐದು ದಶಕಗಳಿಂದ ಶ್ರೀಸ್ವಾಮಿಯ ಜಾತ್ರೆಯನ್ನು ಭಕ್ತಿಶ್ರದ್ದೆಯಿಂದ ಆಚರಣೆ ಮಾಡಲಾಗುತ್ತಿದೆ. ಚಳ್ಳಕೆರೆ ತಾಲ್ಲೂಕು ಸೇರಿದಂತೆ ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಸಂಖ್ಯೆಯ ಭಕ್ತರು ಆಗಮಿಸುತ್ತಾರೆ. ಶ್ರೀಪಾತಲಿಂಗೇಶ್ವರಸ್ವಾಮಿಯ ಜಾತ್ರೆಗೆ ಎಲ್ಲಾ ರೀತಿಯ ಸಿದ್ದತೆಗಳ ವ್ಯವಸ್ಥೆ ಮಾಡಿಕೊಳ್ಳುತ್ತಿದ್ದು ಭಕ್ತರು ಸಹಕಾರ ನೀಡುವಂತೆ ಮನವಿ ಮಾಡಿದರು.

ಉತ್ಸವ ಸಮಿತಿ ಕಾರ್ಯದರ್ಶಿ ಕರೀಕೆರೆ ನಾಗರಾಜು ಮಾತನಾಡಿ, ಶ್ರೀಪಾತಲಿಂಗೇಶ್ವರಸ್ವಾಮಿಯ ಜಾತ್ರೆ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ದೇವಸ್ಥಾನದ ಆಡಳಿತ ಮಂಡಳಿ ವತಿಯಿಂದ ಈಗಾಗಲೇ ಕ್ಷೇತ್ರ ಶಾಸಕರಿಗೆ ದೇವಸ್ಥಾನದ ಅಭಿವೃದ್ಧಿ ಕಾಮಗಾರಿಗಳಿಗೆ ಹಣ ಬಿಡುಗಡೆ ಮಾಡುವಂತೆ ಮನವಿ ಮಾಡಲಾಗಿದೆ. ಕ್ಷೇತ್ರದ ಶಾಸಕರು ಜಾತ್ರೋತ್ಸವದಲ್ಲಿ ಪಾಲ್ಗೊಂಡು ಸಮಿತಿ ಸದಸ್ಯರೊಂದಿಗೆ ಭಕ್ತರೂ ಸೇರಿ ಶಾಸಕರಿಗೆ ವಿಶೇಷ ಅನುದಾನಕ್ಕಾಗಿ ಮನವಿ ಮಾಡಿಕೊಳ್ಳಲಾಗುವುದು. ಈ ಕಾರ್ಯಕ್ಕೆ ಎಲ್ಲರೂ ಕೈಜೋಡಿಸುವಂತೆ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಚಂದ್ರಣ್ಣ, ಪಾತಲಿಂಗಪ್ಪ, ನರೇಂದ್ರಕುಮಾರ್, ಜುಂಜರಗುಂಟೆನಾಗರಾಜು, ಪಿಡಿಒ ವೇದಮೂರ್ತಿ, ಪ್ರಕಾಶ್ ಮುಂತಾದವರು ಉಪಸ್ಥಿತರಿದ್ದರು.

## ಪ್ರಥಮ ಪಿಯುಸಿ ವಿದ್ಯಾರ್ಥಿನಿ ದಿಢೀರ್ ನಾಪತ್ತೆ

**ಚಳ್ಳಕೆರೆ:** ವಾಲ್ಮೀಕಿ ನಗರದ ಶಿಕ್ಷಕರೊಬ್ಬರ ಪುತ್ರಿ ಪಿಯುಸಿ ವಿದ್ಯಾರ್ಥಿನಿಯನ್ನು ಮನೆಯಿಂದ ದಿಢೀರ್ ನಾಪತ್ತೆಯಾಗಿದ್ದು, ಅಪಹರಣವಾಗಿದೆ ಎಂದು ಪೋಷಕರು ಪೊಲೀಸರಿಗೆ ದೂರು ನೀಡಿರುತ್ತಾರೆ. ವಾಲ್ಮೀಕಿ ನಗರದ ಪಂಪ್‌ಹೌಸ್ ಬಳಿ ಇರುವ ಶಿಕ್ಷಕ ಟಿ.ಚನ್ನಬಸಪ್ಪರವರ ಪುತ್ರಿ ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಪ್ರಥಮ ಪಿಯುಸಿ ಅಭ್ಯಾಸ ಮಾಡುತ್ತಿದ್ದು, ಫೆ.24ರಂದು ಕಾಲೇಜಿ ಹೋಗಿದ್ದು, ನಂತರ ಮನೆಗೆ ವಾಪಾಸ್ ಬಂದಿರುವುದಿಲ್ಲ. ನಾನು ಮತ್ತು ನನ್ನ ಹೆಂಡತಿ ತಮ್ಮ ಸ್ವಗ್ರಾಮ ಕೊಂಡ್ಲಹಳ್ಳಿ ದೇವರ ಕಾರ್ಯಕ್ಕೆ ತೆರಳಿದ್ದು ವಾಪಾಸ್ ಬಂದು ನೋಡಿದಾಗ ಮಗಳು ಮನೆಯಲ್ಲಿ ಇರಲಿಲ್ಲ. ನನ್ನ ಮಗಳನ್ನು ಯಾರೋ ಅಪಹರಿಸಿದ್ದಾರೆಂದು ದೂರು ನೀಡಿದ್ದಾರೆ.

**ಪ್ರಮುಖ ಸುದ್ದಿ**

**ಗಾಂಧಿ ಚಿಂತನೆ ಪುಸ್ತಕಗಳೊಂದಿಗೆ ಸ್ಪರ್ಧಾತ್ಮಕ ಪರೀಕ್ಷೆ, ಸಾಹಿತ್ಯಾತ್ಮಕದೊಂದಿಗೆ ದಿನಪತ್ರಿಕೆಗಳು ಲಭ್ಯ**

# ಗಾಂಧಿ ಭವನದಲ್ಲಿ ಗ್ರಂಥಾಲಯ ಆರಂಭ

» **ದಾವಣಗೆರೆ**

ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಚಿಂತನೆಗಳು, ಆದರ್ಶಗಳನ್ನು ತಿಳಿಸಿಕೊಡುವುದರೊಂದಿಗೆ ಇತಿಹಾಸ, ಸಾಹಿತ್ಯಾತ್ಮಕ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಪೂರಕವಾದ ಪುಸ್ತಕವುಳ್ಳ ಗ್ರಂಥಾಲಯವನ್ನು ಗಾಂಧಿ ಭವನದಲ್ಲಿ ಸ್ಥಾಪನೆ ಮಾಡುವುದರೊಂದಿಗೆ ಸಾರ್ವಜನಿಕರಿಗೆ, ಓದುಗರಿಗೆ ಹಾಗೂ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಿದ್ದು ಇದರ ಸದುಪಯೋಗ ಮಾಡಿಕೊಳ್ಳಲು ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ಕರೆ ನೀಡಿದರು.

ಅವರು ಗುರುವಾರ ದಾವಣಗೆರೆ ನಗರದ ಹೊರ ವಲಯದಲ್ಲಿರುವ ರಾಮನಗರದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ನಿರ್ಮಾಣ ಮಾಡಿರುವ ಗಾಂಧಿ ಭವನದಲ್ಲಿ ಗ್ರಂಥಾಲಯ ಇಲಾಖೆಯಿಂದ ನಗರ ಗ್ರಂಥಾಲಯ ಶಾಖೆಯನ್ನು ಪ್ರಾರಂಭಿಸಿ ಮಾತನಾಡಿದರು.



ಗಾಂಧಿ ಚಿಂತನೆಗಳನ್ನು ಜನರು ಮತ್ತು ಯುವ ಜನರಲ್ಲಿ ಬೆಳೆಸಬೇಕೆಂದು ಸರ್ಕಾರ ಎಲ್ಲಾ ಜಿಲ್ಲೆಗಳಲ್ಲಿ ಗಾಂಧಿ ಭವನ ನಿರ್ಮಾಣ ಮಾಡಲು ಉದ್ದೇಶಿಸಿ ದಾವಣಗೆರೆಯಲ್ಲಿ ಸುಂದರವಾದ ಗಾಂಧಿ ಭವನ ನಿರ್ಮಾಣ ಮಾಡಲಾಗಿದೆ. ಗಾಂಧಿ ಭವನದಿಂದ ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ಅನುಕೂಲವಾಗಬೇಕೆಂದು ಇಲ್ಲಿ ಗ್ರಂಥಾಲಯ ಶಾಖೆಯನ್ನು ಸ್ಥಾಪನೆ ಮಾಡುವ ಮೂಲಕ ಗಾಂಧಿ ಕುರಿತ ಪುಸ್ತಕಗಳು, ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗೆ ಬೇಕಾದ ಪುಸ್ತಕಗಳು, ಕಥೆ, ಕಾದಂಬರಿ ಸೇರಿದಂತೆ ಪಠ್ಯಕ್ರಮದ ಪುಸ್ತಕಗಳನ್ನು ಇಲ್ಲಿನ ಗ್ರಂಥಾಲಯದಲ್ಲಿ ಸಂಗ್ರಹಿಸಲಾಗಿದೆ. ಮತ್ತು ದಿನನಿತ್ಯ ಬರುವ ರಾಜ್ಯ ಮಟ್ಟದ ಪ್ರಮುಖ ದಿನಪತ್ರಿಕೆಗಳು, ಸ್ಥಳೀಯ ಪತ್ರಿಕೆಗಳು ಇಲ್ಲಿ ಓದುಗರಿಗೆ ಲಭಿಸಲಿದೆ ಎಂದರು.

ಗ್ರಂಥಾಲಯವು ಸಾರ್ವಜನಿಕರಿಗೆ, ವಿದ್ಯಾರ್ಥಿಗಳಿಗೆ ಮುಕ್ತವಾಗಿದ್ದು ಪ್ರಶಾಂತತೆ ಕಾಪಾಡಿಕೊಂಡು ಓದುಗರು ಇದರ ಲಾಭ ಪಡೆಯಬಹುದಾಗಿದೆ. ಪ್ರತಿ ಸೋಮವಾರ, ಎರಡನೇ ಮಂಗಳವಾರ, 4 ನೇ ಶನಿವಾರ ಹಾಗೂ ವಿಶೇಷ ಸರ್ಕಾರಿ ರಜಾ ದಿನಗಳಂದು ಮಾತ್ರ ಗ್ರಂಥಾಲಯಕ್ಕೆ ರಜೆ ಇರುತ್ತದೆ. ಉಳಿದಂತೆ ಪ್ರತಿ ನಿತ್ಯ ಬೆಳಗ್ಗೆ 9 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಮತ್ತು ಮಧ್ಯಾಹ್ನ 3 ರಿಂದ ಸಂಜೆ 5 ಗಂಟೆಯವರೆಗೆ ಗ್ರಂಥಾಲಯ ಓದುಗರಿಗೆ ತೆರೆದಿರುತ್ತದೆ. ಕಾರ್ಯಕ್ರಮದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಧನಂಜಯ, ನಗರ ಕೇಂದ್ರ ಗ್ರಂಥಾಲಯ ಉಪನಿರ್ದೇಶಕರಾದಪಿ.ಆರ್.ತಿಪ್ಪೇಸ್ವಾಮಿ, ಅವರಗೆರೆ ರುದ್ರಮುನಿ, ಐಗೂರು ತಿಮ್ಮಣ್ಣ, ಹನುಮನಹಳ್ಳಿ ರಾಜು, ಪಿ.ಆಂಜಿನಪ್ಪ, ಬಸವರಾಜು, ಉಷಾರಾಣಿ, ನೀಲಕಂಠಪ್ಪ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ರುಡ್‌ಸೆಟ್‌ನಿಂದ ಸಿ.ಸಿ ಟಿವಿ ಅಳವಡಿಕೆ, ದುರಸ್ಥಿ ಕುರಿತು ತರಬೇತಿಗೆ ಅರ್ಜಿ

» ದಾವಣಗೆರೆ

ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ರುಡ್‌ಸೆಟ್‌ನಿಂದ ಸಿಸಿ ಟಿವಿ ಅಳವಡಿಕೆ ಮತ್ತು ದುರಸ್ಥಿ ಕುರಿತ 13 ದಿನಗಳ ಉಚಿತ ತರಬೇತಿಯನ್ನು ಏಪ್ರಿಲ್ 15 ರಿಂದ ಆಯೋಜಿಸಲಾಗಿದೆ. ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕರು ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತ ಊಟ ಮತ್ತು ವಸತಿ ನೀಡಲಾಗುವುದು. ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು 18 ರಿಂದ 45 ವರ್ಷ ವಯೋಮಾನದವರು ಹಾಗೂ ಬಿಪಿಎಲ್ ಕಾರ್ಡ್ ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು. ಅರ್ಜಿ ಸಲ್ಲಿಸಲು ಏಪ್ರಿಲ್ 10 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗೆ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್‌ಸಂಖ್ಯೆ:9740982585,9380162042, 9113880324 ಗೆ ಸಂಪರ್ಕಿಸಬಹುದಾಗಿದೆ.

### ಕೇಂದ್ರ ಸಶಸ್ತ್ರ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಹುದ್ದೆಗಳಿಗೆ ಅರ್ಜಿ ಆಹ್ವಾನ

» ದಾವಣಗೆರೆ

ಭಾರತ ಸರ್ಕಾರದಿಂದ ದೆಹಲಿ ಪೊಲೀಸ್ ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳ ಸಬ್‌ಇನ್ಸ್‌ಪೆಕ್ಟರ್ ವಿವಿಧ ಹಂತದ ಹುದ್ದೆಗಳ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದ್ದು ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಪಡೆದಿರುವ ಅಭ್ಯರ್ಥಿಗಳು ಅರ್ಹರಿದ್ದಾರೆ. ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್ http://ssc.gov.in ªÀÄvÀÄÛ www.ssc.kkr.kar.nic.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಮಾರ್ಚ್ 28 ಕೊನೆಯ ದಿನವಾಗಿದೆ. ವಯೋಮಿತಿ ಸಾಮಾನ್ಯ ವರ್ಗದ ಅಭ್ಯರ್ಥಿಗಳು 20 ರಿಂದ 25 ವರ್ಷದೊಳಗಿರಬೇಕು. ಪ.ಜಾತಿ, ಪ.ಪಂಗಡ ಮತ್ತು ಒ.ಬಿ.ಸಿ, ಇ.ಎಸ್.ಎಂ ಇತರ ನಿರ್ದಿಷ್ಟ ವರ್ಗಗಳಿಗೆ ವಯೋಮಿತಿ ಸಡಿಲಿಕೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ  08025502520, 0802527342 ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದಾವಣಗೆರೆ. 08192-259446 ಸಂಖ್ಯೆಗೆ ಕರೆ ಮಾಡಬಹುದೆಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಅಧಿಕಾರಿ ರವೀಂದ್ರ.ಡಿ ತಿಳಿಸಿದ್ದಾರೆ.

### ಹಾಟ್ ಏರ್ ಬಲೂನ್ ಸಾಹಸ ಕ್ರೀಡೆಗೆ ಅರ್ಜಿ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮತ್ತು ಯುವ ಸಬಲೀಕರಣಮತ್ತುಕ್ರೀಡಾ ಇಲಾಖೆಯವತಿಯಿಂದ ಮಾರ್ಚ್ 16 ಮತ್ತು 17 ರಂದು ರಂದು ಹೈಸ್ಕೂಲ್ ಮೈದಾನದಲ್ಲಿ ಮತದಾರರ ಜಾಗೃತಿ ಅರಿವು ಕಾರ್ಯಕ್ರಮದ ಅಂಗವಾಗಿ ಹಾಟ್ ಏರ್ ಬಲೂನ್ ಸಾಹಸ ಕ್ರೀಡೆಯನ್ನು ಆಯೋಜಿಸಲಾಗಿದೆ.18 ರಿಂದ 29 ವರ್ಷವಯೋಮಾನದ ಯುವಕ ಮತ್ತು ಯುವತಿಯರು ಭಾಗವಹಿಸಲು ಅವಕಾಶ ಇರುತ್ತದೆ. ಮಾ.16 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ಇಲ್ಲಿ ತಮ್ಮ ಚುನಾವಣಾ ಗುರುತಿನ ಚೀಟಿ ಮತ್ತು ಆಧಾರ್ ಕಾರ್ಡ್‌ನ ನಕಲು ಪ್ರತಿಯೊಂದಿಗೆ ರೂ.50/-ಗಳ ನೋಂದಣಿ ಶುಲ್ಕ ಪಾವತಿಸಿ, ಈ ಸಾಹಸ ಕ್ರೀಡೆಯಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ದೂ ಸಂ: 08192-237480 ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರಾದ ಜಯಲಕ್ಷ್ಮೀಬಾಯಿ ತಿಳಿಸಿದ್ದಾರೆ.

### ವ್ಯಕ್ತಿ ಕಾಣೆ

» ದಾವಣಗೆರೆ

ಹರಿಹರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯ ದೇವರಬೆಳಕೆರೆ ಗ್ರಾಮದ ಜಾಕೀರ್ ಹುಸೇನ್ ತಂದೆ ಬುಡ್ಡುಸಾಬ್ 42 ವರ್ಷ, ಇವರು ಕಳೆದ 15.12.2023 ರಂದು ದಾವಣಗೆರೆ ಜಿಲ್ಲಾ ಆಸ್ಪತ್ರೆಗೆ ಹೋಗಿ ಬರುತ್ತೇನೆಂದು ಇದುವರೆಗೂ ಮನೆಗೆ ವಾಪಾಸ್ ಬಂದಿರುವುದಿಲ್ಲ. ಇವರ ಬಗ್ಗೆ ಸುಳಿವು ಸಿಕ್ಕಲ್ಲಿ ಕೂಡಲೇ ದೂ.ಸಂ: 08192-272017, 08192-272017, 262550,253400,237830 ತಿಳಿಸಬೇಕೆಂದು ಎಂದು ಹರಿಹರದ ಪೊಲೀಸ್ ಠಾಣೆಯ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ವ್ಯಕ್ತಿ ಕಾಣೆ:** ಹರಿಹರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯ ಹನಗವಾಡಿ ಗ್ರಾಮದ ಗಣೇಶ್,ಜಿ,ಆರ್ ತಂದೆ ರುದ್ರಪ್ಪ 49 ವರ್ಷ, ಇವರು ಕಳೆದ 12.1.2024 ರಂದು ಮನೆಯಿಂದ ಎದ್ದು ಹೋದವರು ಇದೂವರೆಗೂ ಮನೆಗೆ ವಾಪಾಸ್ ಬಂದಿರುವುದಿಲ್ಲ. ಇವರ ಬಗ್ಗೆ ಸುಳಿವು ಸಿಕ್ಕಲ್ಲಿ ಕೂಡಲೇ ದೂ.ಸಂ: 08192-272017, 08192-272017, 262550,253400,237830 ತಿಳಿಸಬೇಕೆಂದು ಎಂದು ಹರಿಹರದ ಪೊಲೀಸ್ ಠಾಣೆಯ ಉಪನಿರೀಕ್ಷಕರು ತಿಳಿಸಿದ್ದಾರೆ.

# ನರೇಗಾದಡಿ ಕೆಲಸ ಕೊಡುತ್ತೇವೆ, ಯಾರೂ ಗುಳೇ ಹೋಗಬೇಡಿ ಜಿಪಂ ಸಿಇಒ ಸೋಮಶೇಖರ್ ಮನವಿ

» ಚಿತ್ರದುರ್ಗ





ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಇದ್ದು, ಕೂಲಿ ಕೆಲಸ ಅರಸಿಕೊಂಡು, ಯಾರೂ ಕೂಡ ಗುಳೇ ಹೋಗಬೇಡಿ, ನರೇಗಾ ಯೋಜನೆಯಡಿ ಸ್ಥಳೀಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿಯೇ ಕೂಲಿ ಕೆಲಸ ಕೊಟ್ಟು, ಸಕಾಲದಲ್ಲಿಯೇ ಕೂಲಿ ಹಣ ನೀಡುತ್ತೇವೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ. ಸೋಮಶೇಖರ್ ಹೇಳಿದರು.

ಹೊಳಲ್ಕೆರೆ ತಾಲ್ಲೂಕು ಹಿರೇ ಎಮ್ಮಿಗನೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ಕಲ್ಯಾಣಿ ಅಭಿವೃದ್ಧಿ, ಗ್ರಾಮೀಣ ಉದ್ಯಾನವನ, ಚರಂಡಿ, ರಸ್ತೆ ಕಾಮಗಾರಿಗಳನ್ನು ಗುರುವಾರ ವೀಕ್ಷಿಸಿ, ಬಳಿಕ ಅವರು ಮಾತನಾಡಿದರು.

ಮಳೆಯ ಕೊರತೆಯಿಂದಾಗಿ ಈ ಬಾರಿ ಜಿಲ್ಲೆಯಲ್ಲಿ ತೀವ್ರ ಬರ ಪರಿಸ್ಥಿತಿ ಇದೆ. ಸರ್ಕಾರದ ನಿರ್ದೇಶನದಂತೆ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಈಗಾಗಲೆ ನರೇಗಾ ಯೋಜನೆಯಡಿ ಕೂಲಿ ಆಧಾರಿತ ಕಾಮಗಾರಿಗಳನ್ನು ಪ್ರಾರಂಭಿಸಲು ಕ್ರಮ ಕೈಗೊಂಡಿದ್ದೇವೆ. ಉದ್ಯೋಗವನ್ನು ಅರಸಿಕೊಂಡು ಯಾರೂ ಕೂಡ ಗುಳೇ ಹೋಗಬಾರದು, ತಮ್ಮ ತಮ್ಮ ಗ್ರಾಮಗಳಲ್ಲಿಯೇ ನರೇಗಾದಡಿ ನೀಡುವ ಉದ್ಯೋಗವನ್ನು ನೀಡುತ್ತೇವೆ. ಕೆಲಸ ಅಗತ್ಯವಿರುವವರು ಕೂಡಲೆ ಸಂಬಂಧಿಸಿದ ಗ್ರಾಮ ಪಂಚಾಯತಿಗೆ ಭೇಟಿ ನೀಡಿ, ತಿಳಿಸಬೇಕು. ಆಯಾ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿಯೇ ಕೂಲಿ ಕೆಲಸ ನೀಡುತ್ತೇವೆ, ಅಲ್ಲದೆ ಸಕಾಲಕ್ಕೆ ಕೂಲಿ ಹಣವನ್ನು ಕೂಡ ಪಾವತಿಸಲಾಗುವುದು. ಗ್ರಾಮೀಣ ಭಾಗದ ಮಹಿಳಾ ಕೂಲಿಕಾರರು ಹೆಚ್ಚು ಹೆಚ್ಚು ನರೇಗಾ ಯೋಜನೆಯ ಸದ್ಬಳಕೆ ಮಾಡಿಕೊಂಡು, ಬರ ಪರಿಸ್ಥಿತಿಯಲ್ಲಿಯೇ ಆರ್ಥಿಕವಾಗಿ ಸದೃಢರಾಗಬೇಕು. ಅಧಿಕಾರಿಗಳು ನರೇಗಾ ಯೋಜನೆ ಅನುಷ್ಠಾನಗೊಳಿಸುವಾಗ 60 : 40 ಅನುಪಾತವನ್ನು ತಪ್ಪದೆ ಪಾಲಿಸಬೇಕು, ಈ ಮೂಲಕ ಇನ್ನೂ ಹೆಚ್ಚು ಉತ್ತಮ ಗುಣಮಟ್ಟದ ಆಸ್ತಿಗಳ ಸೃಜನೆಯನ್ನು ಮಾಡಬೇಕು ಎಂದು ಸಿಇಒ ಸೋಮಶೇಖರ್ ಹೇಳಿದರು.

ನಂತರ ಇದೇ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ನಿರ್ವಹಿಸುತ್ತಿರುವ ಕೂಸಿನ ಮನೆಗೆ ಭೇಟಿ ನೀಡಿದ ಅವರು, ಮಕ್ಕಳಿಗೆ ಸರಿಯಾದ ಸಮಯಕ್ಕೆ ಆಹಾರ ವಿತರಣೆ ಆಗಬೇಕು, ಗುಣಮಟ್ಟದ ಆಹಾರ ಮತ್ತು ಕುಡಿಯುವ ನೀರನ್ನು ಪೂರೈಸಬೇಕು, ಮತ್ತು ಮಕ್ಕಳ ಆರೋಗ್ಯವನ್ನು ತುಂಬಾ ಜಾಗರೂಕತೆಯಿಂದ ಕಾಳಜಿ ವಹಿಸಿ ನೋಡಿಕೊಳ್ಳುವಂತೆ ಕೂಸಿನ ಮನೆ ನಿರ್ವಾಹಕರಿಗೆ ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗೆ ಸೂಚಿಸಿದರು.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಒಟ್ಟು 7 ಗ್ರಾಮಗಳಿದ್ದು ಕಡೂರು ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ ಎಂದು ಗ್ರಾಮಸ್ಥರು ಇದೇ ಸಂದರ್ಭದಲ್ಲಿ ಸಿಇಒ ಅವರ ಗಮನಕ್ಕೆ ತಂದರು. ಸ್ಪಂದಿಸಿದ ಸಿಇಒ ಅವರು, ಅತ್ಯಂತ ತುರ್ತಾಗಿ ಸ್ಥಳೀಯ ಖಾಸಗಿ ಬೋರ್‌ವೇಲ್ ಬಾಡಿಗೆಗೆ ಪಡೆದು ಸಾರ್ವಜನಿಕರಿಗೆ ಕುಡಿಯುವ ನೀರನ ಸಮಸೆಯನ್ನು ಪರಿಹರಿಸುವಂತೆ ಸೂಚಿಸಿದರು.

ಹಿರೇ ಎಮ್ಮಿಗನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸುಮಾರು 7000 ಸಾವಿರ ಜನಸಂಖ್ಯೆಯಿದ್ದು, 17 ಗ್ರಾಮ ಪಂಚಾಯಿತಿಯ ಸದಸ್ಯರಿದ್ದಾರೆ. ಹೀಗಾಗಿ ಈ ಗ್ರಾಮ ಪಂಚಾಯಿತಿಯನ್ನು ಗ್ರೇಡ್ 1 ಗ್ರಾಮ ಪಂಚಾಯಿತಿಯನ್ನಾಗಿ ಮಾಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಬೇಕು. ಗ್ರಾ.ಪಂ. ಕಟ್ಟಡ 30 ವರ್ಷ ಹಳೆಯದಾಗಿದ್ದು, ಶಿಥಿಲವಾಗಿದೆ, ಹೊಸ ಕಟ್ಟಡ ನಿರ್ಮಾಣಕ್ಕೆ ಅನುದಾನ ಒದಗಿಸುವಂತೆ ಸದಸ್ಯರು ಮನವಿ ಮಾಡಿದರು, ಇದಕ್ಕೆ ಪ್ರತಿಕ್ರಿಯಿಸಿದ ಸಿಇಒ, ಸದಸ್ಯರ ಶಿಫಾರಸ್ಸಿನಂತೆ ಮೇಲ್ದರ್ಜೆಗೇರಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು, ನರೇಗಾ ಯೋಜನೆಯಡಿ ಗ್ರಾಮ ಪಂಚಾಯಿತಿ ಕಟ್ಟಡ ನಿರ್ಮಾಣಕ್ಕೆ 20 ಲಕ್ಷ ರೂ. ಅನುದಾನ ಬಳಕೆಗೆ ಅವಕಾಶವಿದ್ದು, ಕ್ರಿಯಾ ಯೋಜನೆ ರೂಪಿಸಿ, ಅನುಮೋದನೆ ಪಡೆದು, ಹೊಸ ಕಟ್ಟಡ ನಿರ್ಮಿಸಿಕೊಳ್ಳಲು ಸೂಚಿಸಿದರು. ಗ್ರಾಮ ಪಂಚಾಯಿತಿಯು ಕರವಸೂಲಿಯಲ್ಲಿ ಅತ್ಯಂತಹಿಂದುಳಿದಿದ್ದು,ಅರೇಮಲೆನಾಡಿನ ಭಾಗವಾಗಿರುವುದರಿಂದ ಅತಿ ಹೆಚ್ಚಿನ ವಸೂಲಾತಿಯನ್ನು ಮಾಡಿ, ಗ್ರಾಮ ಪಂಚಾಯಿತಿಯ ಸಂಪನ್ಮೂಲ ಹೆಚ್ಚು ಮಾಡಿಕೊಂಡು ಗ್ರಾಮಗಳ ಅಭಿವೃದ್ಧಿ ಮಾಡುವಂತೆ ಸೂಚನೆ ನೀಡಿದರು.

ಗ್ರಾಮದ ಸರ್ಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ಅಲ್ಲಿನ ಶಿಕ್ಷಕರೊಂದಿಗೆ ಮತ್ತು ಎಸ್.ಎಸ್.ಎಲ್.ಸಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳೊಂದಿಗೆ ವಾರ್ಷಿಕ ಪರೀಕ್ಷೆಯ ಪೂರ್ವ ತಯಾರಿಯ ಬಗ್ಗೆ ಸಂವಾದ ನಡೆಸಿದ ಅವರು, ಮಕ್ಕಳು ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು. ಏಕಾಗ್ರತೆಯಿಂದ ವ್ಯಾಸಂಗ ಮಾಡಿ, ಉತ್ತಮ ಅಂಕಗಳನ್ನು ಪಡೆದು ತಮ್ಮ ಶಾಲೆಗೆ ಹಾಗೂ ತಂದೆ-ತಾಯಿಯವರಿಗೆ ಮತ್ತು ಜಿಲ್ಲೆಗೆ ಕೀರ್ತಿ ತರುವಂತೆ ಸಲಹೆ ನೀಡಿದರು.

ಹಿರೇ ಎಮ್ಮಿಗನೂರು ಗ್ರಾಮ ಪಂಚಾಯಿತಿಯ ಅಧ್ಯಕ್ಷ ಪ್ರಕಾಶ್ ಎಸ್. ಗ್ರಾ.ಪಂ. ಉಪಾಧ್ಯಕ್ಷರು ಹಾಗು ಸರ್ವ ಸದಸ್ಯರೊಂದಿಗೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಸ್ಥಳೀಯ ಸಮಸ್ಯೆಗಳ ಕುರಿತು ಇದೇ ಸಂದರ್ಭದಲ್ಲಿ ಚರ್ಚಿಸಲಾಯಿತು. ಸಭೆಯಲ್ಲಿ ಉಪ ಕಾರ್ಯದರ್ಶಿ ತಿಮ್ಮಪ್ಪ, ತಾ.ಪಂ. ಕಾರ್ಯ ನಿರ್ವಾಹಕ ಅಧಿಕಾರಿ ಶಿವಪ್ರಕಾಶ್, ಸೇರಿದಂತೆ ನರೇಗಾ ಸಹಾಯಕ ನಿರ್ದೇಶಕರು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಭೆಯಲ್ಲಿ ಹಾಜರಿದ್ದರು.

# ಮಾ.16 ರಿಂದ ಶ್ರೀಗುಡಿಬಂಡೆ ಪ್ರತ್ಯಕ್ಷ ವೀರಾಂಜನೇಯ ಸ್ವಾಮಿ ಜಾತ್ರಾ ಮಹೋತ್ಸವ

» ಪರಶುರಂಪುರ





ಸಮೀಪದ ವಡ್ಡೇಪಾಳ್ಯದಲ್ಲಿ ಅಂಧ್ರಾ-ಕರ್ನಾಟಕ ಗಡಿ ಗ್ರಾಮಗಳ ಅರಾಧ್ಯ ದೈವ ಗುಡಿಬಂಡೆ ಪ್ರತ್ಯಕ್ಷ ಶ್ರೀ ವೀರಾಜಂನೇಯ ಸ್ವಾಮಿ ಜಾತ್ರಾಮಹೋತ್ಸವು ಮಾ.16 ರಿಂದ ಮಾ.19ರವರಗೆ ಜರುಗಲಿದೆ. ಗ್ರಾಮದ ವೇದಾವತಿ ನದಿಯಲ್ಲಿ ಮಾ.16 ರಂದು ಸದ್ಭಕ್ತರ ಸಮ್ಮುಖದಲ್ಲಿ ಗಂಗಾಪೂಜೆಯೊಂದಿಗೆ ಜಾತ್ರೆ ವಿಧ್ಯುಕ್ತ ಚಾಲನೆ ದೊರಯಲಿದೆ.ಈ ಉತ್ಸವಕ್ಕೆ ಗುಡಿಬಂಡೆ ವೀರಾಂಜನೇಯಸ್ವಾಮಿ ,ಈರಣ್ಣಸ್ವಾಮಿ ಮೂರ್ತಿಗಳನ್ನ ನೆರೆ ಆಂಧ್ರಾದ ವಡ್ಡೇಪಾಳ್ಯಂನಿಂದ ಕಾಲುನಡಿಗೆಯಲ್ಲಿ ಹೊತ್ತು ಪರಶುರಾಂಪುರಗ್ರಾಮಕ್ಕೆಕರೆತರಲಾಗುತ್ತದೆ.ಬಳಿಕ ವೇದಾವತಿಯ ತೊರೆಯಲ್ಲಿ ಗಂಗಾಪೂಜೆ ,ಭಕ್ತರಿಂದ ಹರಕೆ ಸಮರ್ಪಣೆ , ಜನಪದ ವಾದ್ಯಗಳೊಂದಿಗೆ ಉತ್ಸವ ಮೂರ್ತಿಗಳ ಭವ್ಯ ಮೆರವಣಿಗೆ ನಡೆಯುತ್ತದೆ.ಈ ವೇಳೆಯಲ್ಲಿ ವಿವಿಧ ಜನಪದ ವಾದ್ಯಗಳ ಜತೆ ಇನ್ನಿತರೆ ಕಲಾ ತಂಡಗಳು ಸ್ವಾಮಿಯ ಉತ್ಸವಕ್ಕೆ ಮೆರಗು ನೀಡಲಿವೆ.

ಮಾ.16 ಶನಿವಾರ ಪರಶುರಾಂಪುರದಿಂದ ಸ್ವಾಮಿಯನ್ನ ಕಲಾತಂಡಗಲೊಂದಿಗೆ ಪ್ರಮುಖ ಬೀದಿಗಳಲ್ಲಿ ಭವ್ಯ ಮೆರವಣಿಗೆ ಮೂಲಕ ಸಮೀಪದ ವಡ್ಡೇಪಾಳ್ಯಕ್ಕೆ ಕೊಂಡೊಯ್ದು ಪ್ರತಿಷ್ಠಾಪನೆ ಮಾಡಲಾಗುವುದು.

ಮಾ.17 ಭಾನುವಾರ ಗುಡಿಬಂಡೆ ಪ್ರತ್ಯಕ್ಷ ವೀರಾಜಂನೇಯ ಸ್ವಾಮಿಯ ರಥೋತ್ಸವ ಕಾರ್ಯಕ್ರಮ ಜರುಗಲಿದೆ.ರಥೋತ್ಸವ ಹಾಗೂ ಪೂಜಾ ಕೈಂಕರ್ಯಗಳಲ್ಲಿ ಶಾಸಕ ಟಿ.ರಘುಮೂರ್ತಿ ಭಾಗವಹಿಸಿ ಪುಷ್ಪಹಾರೋಣ ಸಲ್ಲಿಸುವರು.

ಏ.18 ಸೋಮವಾರ ಭಕ್ತಾದಿಗಳಿಗೆ ತೀರ್ಥಪ್ರಸಾದ ವಿನಿಯೋಗ ಜತೆ ಎತ್ತಿನೋಟ ಸ್ಪರ್ಧೆ ಆಯೋಜಿಸಲಾಗಿದೆ ಬಳಿಕ ಬಹುಮಾನ ಹಾಗೂ ಪ್ರಶಸ್ತಿ ಫಲಕ ನೀಡಲಾಗುವುದು.

ಏ.19 ಮಂಗಳವಾರ ಉಟ್ಲು ಪರಿಷೆ ಬಳಿಕ ಸ್ವಾಮಿಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಜಾತ್ರಾ ಮಹೋತ್ಸವಕ್ಕೆ ತೆರೆ ಬೀಳಲಿದೆ.

# ದಾವಣಗೆರೆ: ತಂಬಾಕು ದಾಳಿ, ರೂ.1800 ದಂಡ ವಸೂಲಿ

» ದಾವಣಗೆರೆ




ಅಪರ ಜಿಲ್ಲಾಧಿಕಾರಿಗಳು ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಇವರ ನಿರ್ದೇಶನದಂತೆ ಅಬಕಾರಿ ಇಲಾಖೆ, ದಾವಣಗೆರೆ ವಿಶ್ವವಿದ್ಯಾನಿಲಯ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ವಿಶ್ವವಿದ್ಯಾನಿಲಂಯುದ ವ್ಯಾಪ್ತಿಯಿಂದ 100 ಗಜದ ಅಂತರದೊಳಗೆ ತಂಬಾಕು ಹಾಗೂ ಅದರ ಉತ್ಪನ್ನಗಳನ್ನು ಮಾರಾಟ ಮಾಡುವವರಿಗೆ ಎಚ್ಚರಿಕೆ ನೀಡಿ ಕೋಟ್ಪಾದಡಿ 11 ಪ್ರಕರಣಗಳನ್ನು ದಾಖಲಿಸಿ ರೂ.1800 ದಂಡ ವಿಧಿಸಲಾಯಿತು. ದಾಳಿಯಲ್ಲಿ ವಿಶ್ವವಿದ್ಯಾನಿಲಯದ ಸಮಾಜ ಕಾರ್ಯ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕರು ಹಾಗೂ ತಂಬಾಕು ನಿಯಂತ್ರಣ ನೋಡಲ್ ಅಧಿಕಾರಿ ಪ್ರದೀಪ್ ಬಿ.ಎಸ್ ಅಬಕಾರಿ ನಿರೀಕ್ಷಕರಾದ ಸಂತೋಷ್ ಕುಮಾರ್, ಜಿಲ್ಲಾ ಸಲಹೆಗಾರರಾದ ಸತೀಶ್ ಕಲಹಾಳ್, ಸಮಾಜ ಕಾರ್ಯಕರ್ತರಾದ ದೇವರಾಜ್.ಕೆ.ಪಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಉಮಾಪತಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಯಾದ ವೆಂಕಟಚಲ, ಅಬಕಾರಿ ಉಪನಿರೀಕ್ಷಕರಾದ ಎಸ್.ಕೆ.ಎಸ್ ಶಿವಪ್ರಸಾದ್, ಹಾಗೂ ಅಬಕಾರಿ ಇಲಾಖೆಯ ಸಿಬ್ಬಂದಿ ಇದ್ದರು.

## ಪ್ರಮುಖ ಸುದ್ದಿ

### ನವಜಾತು ಶಿಶುವಿನ ಆರೈಕೆ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಮಕ್ಕಳ ತಜ್ಞ ಡಾ.ತಿಮ್ಮೇಗೌಡ

# ಮಗುವಿನ ಆರೈಕೆ ತಾಯಿ ಗರ್ಭದಿಂದಲೇ ಪ್ರಾರಂಭವಾಗಲಿ

» ಚಿತ್ರದುರ್ಗ



ಗರ್ಭಿಣಿ ಎಂದಾಕ್ಷಣ ಆದಷ್ಟು ಬೇಗನೆ ಆಶಾ ಕಾರ್ಯಕರ್ತರು ಇಲ್ಲವೇ ಅಂಗನವಾಡಿ ಕೇಂದ್ರಗಳಲ್ಲಿ ಹೆಸರು ನೋಂದಾಯಿಸಿ ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿಗಳಿಂದ ತಾಯಿ ಕಾರ್ಡ್ ಪಡೆದು ವೈದ್ಯರಲ್ಲಿ ಪರೀಕ್ಷೆಗೊಳಪಡಬೇಕು. ತಾಯಿ ಗರ್ಭದಿಂದಲೇ ಮಗುವಿನ ಆರೈಕೆ ಪ್ರಾರಂಭವಾಗಬೇಕು ಎಂದು ಸಿರಿಗೆರೆ ಪ್ರಾಥಮಿಕ ಆರೋಗ್ಯ ಕೇಂದ್ರದ ಮಕ್ಕಳ ತಜ್ಞ ಡಾ.ಜಿ.ಆರ್.ತಿಮ್ಮೇಗೌಡ ಹೇಳಿದರು.

ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಗುರುವಾರ ಗರ್ಭಿಣಿಯರು ಮತ್ತು ಎದೆಹಾಲು ಉಣಿಸುವ ತಾಯಂದಿರುಗಳಿಗೆ ನವಜಾತ ಶಿಶುವಿನ ಆರೈಕೆ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ತಾಯಿ ಮರಣ ಶಿಶುಮರಣ ಪ್ರಮಾಣ ಕಡಿಮೆಯಾಗಬೇಕಾದರೆ ಗರ್ಭಿಣಿ ತಾಯಂದಿರು ಕನಿಷ್ಠ ಮೂರು ನಾಲ್ಕು ಬಾರಿ ವೈದ್ಯರಲ್ಲಿ ತಪಾಸಣೆ ಮಾಡಿಸಬೇಕು. ವೈದ್ಯರ ಸಲಹೆ ಸೂಚನೆ ಪಾಲಿಸಿ ಪೌಷ್ಟಿಕ ಆಹಾರ ಸೇವನೆಯೊಂದಿಗೆ ಕಬ್ಬಿನಾಂಶ ಮತ್ತು ಕ್ಯಾಲ್ಸಿಯಂ ಮಾತ್ರೆಗಳನ್ನು ಸಕಾಲಕ್ಕೆ ಸೇವನೆ ಮಾಡಬೇಕು ಎಂದರು.

ಆರೋಗ್ಯ ಸಂಸ್ಥೆಗಳಲ್ಲಿ ಹೆರಿಗೆ ಮಾಡಿಸಿಕೊಂಡು ತಾಯಿಯ ಪಕ್ಕದಲ್ಲಿ ಎದೆಗೆ ತಾಕುವಂತೆ ಮಗು ಬೆಚ್ಚಗಿರುವಂತೆ ನೋಡಿಕೊಳ್ಳಬೇಕು. ಆರು ತಿಂಗಳವರೆಗೆ ಮಗುವಿಗೆ ತಾಯಿ ಎದೆ ಹಾಲು ಕೊಡುತ್ತಾ ಬೇರೆ ಏನನ್ನು ಕೊಡಬಾರದು. ಗುಣಮಟ್ಟದ ಲಸಿಕೆಗಳು ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಲಭ್ಯವಿದ್ದು, ಸಕಾಲಕ್ಕೆ ಲಸಿಕೆಗಳನ್ನು ಮಗುವಿಗೆ ಕೊಡಿಸುವುದರ ಮುಖಾಂತರ ಮಗುವಿನ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.ಮಕ್ಕಳ ತಜ್ಞರಾದ ನಾನು ನನ್ನ ಮಗುವಿಗೂ ಸಹ ಅಂಗನವಾಡಿ ಕೇಂದ್ರದಲ್ಲಿ ಸರ್ಕಾರಿ ಸೌಮ್ಯದ ಗುಣಮಟ್ಟದ ಲಸಿಕೆ ಹಾಕಿಸಿರುತ್ತೇನೆ. ತಾವುಗಳು ಸಹ ತಮ್ಮ ಮಕ್ಕಳಿಗೆ ತಪ್ಪದೇ ಲಸಿಕೆಗಳನ್ನು ಸಕಾಲಕ್ಕೆ ಕೊಡಿಸಿ ಮಗುವಿನ ಆರೋಗ್ಯ ಕಾಪಾಡಿಕೊಳ್ಳುವಂತೆ ಸಲಹೆ ನೀಡಿದರು.

ಹೆರಿಗೆ ಮತ್ತು ಸ್ತ್ರೀರೋಗ ತಜ್ಞೆ ಡಾ.ಪವಿತ್ರ ಮಾತನಾಡಿ, ಹೆಣ್ಣು ಮಕ್ಕಳಿಗೆ 18 ವರ್ಷದ ಒಳಗಡೆ ಮದುವೆ ಮಾಡಬಾರದು. ಮೆದುಳು ಮತ್ತು ಅಂಗಾಂಗಗಳ ಬೆಳವಣಿಗೆಯಾಗದಿರುವ ಸಂದರ್ಭದಲ್ಲಿ ಮದುವೆ ಮಾಡಿದರೆ ಹೆಣ್ಣು ಮಕ್ಕಳಲ್ಲಿ ಗರ್ಭಚೀಲ ಕೆಳಗಡೆ ಬರುವ ಸಾಧ್ಯತೆ ಉಂಟು. ಹೆರಿಗೆ ಸಮಯದಲ್ಲಿ ತಾಯಿ ಮರಣ ಶಿಶುಮರಣ ಸಂಭವಿಸಬಹುದು. ದಿನ ತುಂಬದ ಹೆರಿಗೆ ಆಗಬಹುದು ಹಾಗೂ ಹೆರಿಗೆ ನಂತರ ಒಂದು ಮಗುವಿನಿಂದ ಮತ್ತೊಂದು ಮಗುವಿಗೆ ಕನಿಷ್ಠ ಮೂರು ವರ್ಷಗಳ ಅಂತರ ಇರುವಂತೆ ಕುಟುಂಬ ಯೋಜನೆ ವಿಧಾನಗಳಾದ ಕಾಪರ್ ಟಿ, ಮಾಲಾ -ಯನ್, ಛಾಯಾ ಮಾತ್ರೆಗಳು ಸರ್ಕಾರಿ ಆಸ್ಪತ್ರೆಗಳಲ್ಲಿ ಲಭ್ಯವಿದ್ದು, ಇದರ ಸದುಪಯೋಗ ಪಡಿಸಿಕೊಂಡು ಅಂತರದ ಹೆರಿಗೆ ಅನುಸರಿಸಿ, ಹೆರಿಗೆಯ ನಂತರ ಮೂರು ತಿಂಗಳು ಭಾರವಾದ ಕೆಲಸ ಮಾಡದೆ, ವೈದ್ಯರು ನೀಡಿದ ಕಬ್ಬಿನಾಂಶ ಮತ್ತು ಕ್ಯಾಲ್ಸಿಯಂ ಮಾತ್ರೆಗಳನ್ನು ಸೇವಿಸುತ್ತಾ ತಾಯಂದಿರುಗಳು ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಎಸ್. ಮಂಜುನಾಥ್ ಮಾತನಾಡಿ, ಜೀವನ ಶೈಲಿಯ ಬದಲಾವಣೆಯಿಂದಾಗಿ ಆಧುನಿಕ ಕಾಲದಲ್ಲಿ ಕುರುಕಲು ತಿಂಡಿಗಳಿಗೆ ಮಾರುಹೋಗದೆ ಕಾಲಮಾನಕ್ಕೆ ಸಿಗುವ ಹಣ್ಣು ಹಂಪಲು ಹಸಿ ತರಕಾರಿ ಪೌಷ್ಟಿಕಾಂಶ ಇರುವ ಕಿರುಧಾನ್ಯಗಳ ಬಳಕೆ ಮಾಡಿಕೊಂಡು, ಮೊಳಕೆ ಕಾಳು, ಹಾಲು, ದ್ರವರೂಪದ ಆಹಾರ ಸೇವನೆಯೊಂದಿಗೆ ಉತ್ತಮ ಆರೋಗ್ಯ ಹೊಂದಬೇಕು ಎಂದು ಸಲಹೆ ನೀಡಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ತಾಯಿ ಗರ್ಭದಿಂದ ಜನಿಸಿದ ಮಗು ಹೊರಗಿನ ವಾತಾವರಣಕ್ಕೆ ಹೊಂದಿಕೊಳ್ಳಬೇಕಾದರೆ ಮಗುವನ್ನು ಆದಷ್ಟು ಬೆಚ್ಚಗಿಡಬೇಕು. ಮಗು ಅತ್ತಾಗಲಲ್ಲ ತಾಯಿ ತನ್ನ ಅನುಕೂಲಕ್ಕೆ ತಕ್ಕಂತೆ ಶಾಂತವಾದ ವಾತಾವರಣದಲ್ಲಿ ಕುಳಿತುಕೊಂಡು ಬಂಗಿ ಮತ್ತು ಹೊಂದಾಣಿಕೆಯೊಂದಿಗೆ ಮಗುವಿಗೆ ಎದೆ ಹಾಲು ಉಣಿಸಬೇಕು. ಮಲವಿಸರ್ಜನೆ ನಂತರ ಶಿಶುವನ್ನು ಸ್ವಚ್ಛ ಮಾಡಿದ ನಂತರ ಸೋಪಿನಿಂದ ತಾಯಿ ಸ್ವಚ್ಛವಾಗಿ ಕೈತೊಳೆಯಬೇಕು. ಅಪಾಯಕಾರಿ ಚಿಹ್ನೆಗಳು, ಜ್ವರ, ಮಲದಲ್ಲಿ ರಕ್ತ, ವೇಗದ ಉಸಿರಾಟ, ಕಷ್ಟದ ಉಸಿರಾಟ, ಜಡತ್ವ ಅಥವಾ ಪ್ರಜ್ಞಾಹೀನತೆ, ಮಗು ಎಲ್ಲವನ್ನು ವಾಂತಿ ಮಾಡುತ್ತಿದ್ದರೆ, ಗುಳಿ ಬಿದ್ದ ಕಣ್ಣು, ಪಕ್ಕೆಸೆಳೆತ ಇಂತಹ ಲಕ್ಷಣಗಳು ಕಂಡು ಬಂದಲ್ಲಿ ತುರ್ತಾಗಿ ವೈದ್ಯರಲ್ಲಿ ಪರೀಕ್ಷಿಸಬೇಕು ಎಂದರು .ದಂತ ವೈದ್ಯ ಡಾ. ಪ್ರಸನ್ನಕುಮಾರ್ ಮಾತನಾಡಿ, ಆರೋಗ್ಯವಂತ ಮಗು ದೇಶದ ಸಂಪತ್ತು. ಸೂಕ್ಷ್ಮ ಹಂತದಲ್ಲಿ ಮಗುವಿಗೆ ಸಮಸ್ಯೆಗಳು ಕಂಡ ತಕ್ಷಣ ವೈದ್ಯಾಧಿಕಾರಿಗಳಲ್ಲಿ ಪರೀಕ್ಷೆ ಮಾಡಿಸಿ ಮೂಢನಂಬಿಕೆ ತೊಡೆದು ಹಾಕಿ ಸೂಕ್ತ ಚಿಕಿತ್ಸೆ ಪಡೆದು ಮಗುವನ್ನು ಸಂರಕ್ಷಿಸಬೇಕೆಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಜಾನಕಿ ಅವರು ಮಕ್ಕಳಿಗೆ 12 ಮಾರಕ ರೋಗಗಳ ವಿರುದ್ಧ ನೀಡುವ ಲಸಿಕೆಗಳು ಮತ್ತು ಅದರ ಮಹತ್ವದ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಫಾರ್ಮಸಿ ಅಧಿಕಾರಿ ಮೋಹನ್ ಕುಮಾರ್, ಶುಶ್ರೂಷಾಧಿಕಾರಿಗಳಾದ ತಾರಾ, ಪ್ರೇಮ, ನಾಗವೇಣಿ, ಪಿಎಚ್‌ಸಿಓ ಶಾರದಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿ ಸುನಿಲ್ ಕುಮಾರ್, ಕೌನ್ಸಿಲರ್ ಕಾವ್ಯ, ಆರೋಗ್ಯ ಮಿತ್ರ ಶಿವರಾಜ್, ಆಶಾ ಕಾರ್ಯಕರ್ತೆಯರು ಸೇರಿದಂತೆ 30ಕ್ಕೂ ಹೆಚ್ಚು ಎದೆ ಹಾಲುಣಿಸುವ ತಾಯಂದಿರು, ಸಾರ್ವಜನಿಕರು ಇದ್ದರು.

## ಫಾಸ್ಟ್ ನ್ಯೂಸ್

### ಲಕ್ಷ್ಮೀದೇವಮ್ಮ ನಿಧನ

» **ಹೊಸದುರ್ಗ**



ಪಟ್ಟಣದ ದುರ್ಗಾ ಐಟಿಐ ಕಾಲೇಜಿನ ಅಧ್ಯಕ್ಷರಾಗಿದ್ದ ಬಲ್ಲಾಳಸಮುದ್ರದ ದಿವಂಗತ ಎಸ್.ವೆಂಕಟರಾಮನಾಯ್ಡು ಅವರ ಪತ್ನಿ ಲಕ್ಷ್ಮೀದೇವಮ್ಮ (81) ಅವರು ಪಟ್ಟಣದ ಅವರ ನಿವಾಸದಲ್ಲಿ ಬುಧವಾರ ಮುಂಜಾನೆ ನಿಧನರಾದರು ಮೃತರು ಇಬ್ಬರು ಪುತ್ರರು ಹಾಗು ಅಪಾರ ಬಂಧು ಬಳಗವನ್ನ ಬಿಟ್ಟು ಅಗಲಿದ್ದಾರೆ ಮೃತರ ಅಂತ್ಯಕ್ರಿಯೆ ಬುಧುವಾರ ಮದ್ಯಾಹ್ನ ಅಪಾರ ಬಂಧು ಬಳಗದ ನಡುವೆ ಪಟ್ಟಣದ ರುದ್ರಭೂಮಿಯಲ್ಲಿ ನೆರವೇರಿತು.

### ತಂಬಾಕು ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ಮುಂದೂಡಿಕೆ

» **ದಾವಣಗೆರೆ**

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಮನ್ವಯ ಸಮಿತಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯನ್ನು ಮಾರ್ಚ್ 16 ರಂದು ಬೆಳಿಗ್ಗೆ 11.30ಕ್ಕೆ ಮೂಂದೂಡಲಾಗಿದೆ.

### ಪ್ರಾಣಿ ಬಲಿ ನಿಷೇಧ ನಿಯಮ ಉಲ್ಲಂಘಿಸಿದರೆ ದಂಡ, ಸೆರೆವಾಸ

» **ದಾವಣಗೆರೆ**

ದಾವಣಗೆರೆಯಲ್ಲಿ ಮಾರ್ಚ್ 17 ರಿಂದ 24 ರವರೆಗೆ ಶ್ರೀದುರ್ಗಾಂಬಿಕಾ ದೇವಿ ಜಾತ್ರೆ ನಡೆಯಲಿದೆ. ಕರ್ನಾಟಕ ಪ್ರಾಣಿಬಲಿ ತಡೆ ಕಾಯ್ದೆ 1959 ರ ಮತ್ತು ನಿಯಮ 1963 ರ ಪ್ರಕಾರ ಜಾತ್ರಾ ಅವಧಿಯಲ್ಲಿ ಸಾರ್ವಜನಿಕ ದೇವಸ್ಥಾನ ಸ್ಥಳ, ಪೂಜಾ ಸ್ಥಳ ಹಾಗೂ ದೇವಸ್ಥಾನದ ಸುತ್ತಮುತ್ತಲ ಪ್ರದೇಶದಲ್ಲಿ ಪಾಣಿ ಬಲಿ ಸಂಪೂರ್ಣ ನಿಷೇಧಿಸಲಾಗಿದೆ. ನಿಯಮ ಉಲ್ಲಂಘಿಸಿದರೆ ಕಲಂ (6) ರನ್ವಯ ದಂಡ ಮತ್ತು ಆರು ತಿಂಗಳು ಸೆರವಾಸ, ಕಲಂ (7)ರ ನಿಯಮದನ್ವಯ ಉಲ್ಲಂಘಿಸಿ ಯಾವುದೇ ವ್ಯಕ್ತಿಯನ್ನು ವಾರೆಂಟ್ ಇಲ್ಲದೆ ಪೊಲೀಸ್ ಇನ್ಸ್‌ಪೆಕ್ಟರ್ ರವರು ದಸ್ತಗಿರಿ ಮಾಡಲು ಅಧಿಕಾರವಿದೆ. ಜಾತ್ರೆಯಲ್ಲಿ ಪ್ರಾಣಿಬಲಿ ಕೊಡುವುದನ್ನು ನಿಷೇಧಿಸಲಾಗಿದ್ದು ಸಾರ್ವಜನಿಕರು ಈ ನಿಯಮಗಳನ್ನು ಚಾಚು ತಪ್ಪದೇ ಪಾಲಿಸಲು ಸೂಚಿಸಲಾಗಿದೆ. ತಪ್ಪಿದಲ್ಲಿ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದೆಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಡಾ.ವೆಂಕಟೇಶ್.ಎಂ.ವಿ ತಿಳಿಸಿದ್ದಾರೆ.

### ಮತ್ಸ್ಯವಾಹಿನಿ ಇ-ತ್ರಿಚಕ್ರ ವಾಹನ ಪರವಾನಿಗೆಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯ ಮೀನುಗಾರಿಕೆ ಇಲಾಖಾ ವತಿಯಿಂದ 2023–24ನೇ ಸಾಲಿಗೆ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆಯಡಿ, ಸ್ಥಳೀಯವಾಗಿ ಮೀನು ಸೇವೆಯನ್ನು ಪ್ರೋತ್ಸಾಹಿಸಲು, ಪರಿಸರ ಸ್ನೇಹಿ ಸುಸಜ್ಜಿತ ಕಿಯೋಸ್ಕ್ ಮಾದರಿಯ ಇ–ತ್ರಿಚಕ್ರ ವಾಹನಗಳಲ್ಲಿ ತಾಜಾ ಮೀನು ಉತ್ಪನ್ನ ಮಾರಾಟಕ್ಕಾಗಿ ಸಾರ್ವಜನಿಕ ಸಹಭಾಗಿತ್ವದ ಮೂಲಕ ಇ–ವಾಹನಗಳನ್ನು ಪರವಾನಗಿ ಆಧಾರದಲ್ಲಿ ಪಡೆಯಲು ಮೀನುಗಾರಿಕೆಯಲ್ಲಿ ತೊಡಗಿರುವ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಮಾರ್ಚ್ 25 ಅರ್ಜಿ ಸಲ್ಲಿಸಲು ಕೊನೆಯ ದಿನ.ಜಿಲ್ಲೆಗೆ 3 ಭೌತಿಕ ಗುರಿ ನಿಗದಿಪಡಿಸಲಾಗಿದ್ದು, ಸಾಮಾನ್ಯ ವರ್ಗದವರಿಗೆ ಭದ್ರತಾ ಠೇವಣಿ ರೂ.1 ಲಕ್ಷ ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಮಹಿಳೆಯರಿಗೆ ಭದ್ರತಾ ಠೇವಣಿ ರೂ.0.50 ಲಕ್ಷ ನಿಗದಿಪಡಿಸಲಾಗಿದೆ. ಪರವಾನಿಗೆದಾರರು ಮಾಹೆಯಾನ ರೂ. 3000/– ಮಾಸಿಕ ಶುಲ್ಕ ಭರಿಸಬೇಕಾಗುತ್ತದೆ. ಆಸಕ್ತರು ಮಾ.25 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಮಾಹಿತಿಗಾಗಿ ಮೀನುಗಾರಿಕೆ ಉಪನಿರ್ದೇಶಕ ಕಚೇರಿ, ಚಿತ್ರದುರ್ಗ, ಹೊಸದುರ್ಗ, ಹಿರಿಯೂರು, ಚಳ್ಳಕೆರೆ ಮತ್ತು ಮೊಳಕಾಲ್ಮೂರು ಮೀನಿಗಾರಿಕೆ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಬಹುದು

### ಮಾ.16 ರಂದು ವಿವಿಧ ಜಯಂತಿ ಪೂರ್ವಸಭೆ

» **ಚಿತ್ರದುರ್ಗ**

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಾರ್ಚ್ 16 ರಂದು ವಿವಿಧ ಜಯಂತಿ ಪೂರ್ವಭಾವಿ ಸಭೆಗಳು ಜರುಗಲಿವೆ. ಬೆಳಿಗ್ಗೆ 11 ಗಂಟೆಗೆ ಶ್ರೀ ರೇಣುಕಾಚಾರ್ಯ ಜಯಂತಿ, 12 ಗಂಟೆಗೆ ಶ್ರೀ.ಯೋಗಿನಾರೆಯಣ ಯತೀಂದ್ರರ ಜಯಂತಿ ಹಾಗೂ ಮಧ್ಯಾಹ್ನ 12:30ಕ್ಕೆ ಶ್ರೀ. ಅಗ್ನಿಬನ್ನಿರಾಯ ಜಯಂತಿ ಪೂರ್ವ ಸಿದ್ಧತೆ ಕುರಿತು ಸಭೆಗಳು ನಡೆಯಲಿವೆ. ಸಮಾಜದ ಹಿರಿಯ ಮುಖಂಡರು, ಗಣ್ಯರು, ಸಾರ್ವಜನಿಕರು ಹಾಜರಾಗಿ ಸಲಹೆ ಸೂಚನೆಗಳನ್ನು ನೀಡಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ ತಿಳಿಸಿದ್ದಾರೆ.

# ಮಾತೃ ಹೃದಯಿ ಶ್ರೀಮತಿ ಡಾ.ಪ್ರಭಾ ಮಲ್ಲಿಕಾರ್ಜುನ

## ಸರಳ ಸಜ್ಜನಿಕೆ, ಸರ್ವ ಧರ್ಮ ಸಮಾನತೆಯ ಸಹೃದಯಿ, ಸ್ನೇಹಮಹಿ ಮಹಿಳೆ











ಸಹನೆಗೆ ಮತ್ತೊಂದು ಹೆಸರು ಶ್ರೀಮತಿ ಡಾ. ಪ್ರಭಾ ಮಲ್ಲಿಕಾರ್ಜುನ ಶ್ರೀಮಂತಿಕೆ ಎಂಬುದು ಆಡಂಬರದ ಜೀವನದಲ್ಲಿ ಇಲ್ಲಿ ಬಡವರ ಸೇವೆಯಲ್ಲಿದೆ ಎಂದು ಸಮಾಜ ಸೇವೆ ಮಾಡಿ ತೋರಿಸಿಕೊಟ್ಟ ಮಮಕಾರದ ಮಹಿಳೆ ಇವರು. ಮಗುವಿನ ಪ್ರೀತಿ ತಾಯಿಗೆ ಗೊತ್ತು ಎಂಬಂತೆ ಬಡವರ ಕಷ್ಟ ಪ್ರಭಾ ಮಲ್ಲಿಕಾರ್ಜುನ ಅವರಿಗೆ ಗೊತ್ತು. ಕಷ್ಟ ಎಂದು ಮನೆ ಬಾಗಿಲಿಗೆ ಬಂದರೆ ನಮ್ಮವರಂತೆ ಕಂಡು ಅವರ ಸಂಕಷ್ಟಕ್ಕೆ ಸ್ಪಂದಿಸಿ ಹೃದಯ ಗೆದ್ದಂತವರು.

ಕಳೆದ ಹಲವು ದಶಕಗಳಿಂದ ಎಲ್ಲರಿಗೂ ಉತ್ತಮ ಆರೋಗ್ಯ ಸಿಗಬೇಕೆಂದು ಹಳ್ಳಿ ಹಳ್ಳಿಗಳಿಗೆ ಭೇಟಿ ನೀಡಿ ಅವರಿಗೆ ಉಚಿತ ಆರೋಗ್ಯ ತಪಾಸಣಾ ಮತ್ತು ಚಿಕಿತ್ಸೆ ವ್ಯವಸ್ಥೆ ಮಾಡುತ್ತಿದ್ದಾರೆ. ಒಂದು ಪ್ರತಿಷ್ಠಿತ ರಾಜಕೀಯ ಹಿನ್ನೆಲೆ ಹೊಂದಿದ ಕುಟುಂದ ಹೆಣ್ಣು ಮಗಳಾಗಿದ್ದರು ಎಂದು ಅವರ ಸ್ವಾರ್ಥಕ್ಕಾಗಿ ಸೇವೆ ಮಾಡಿದವರಲ್ಲ. ಬಡವರ ಬದುಕು ಬದಲಾಗಬೇಕು,ಜೀವನ ಸುಧಾರಣೆಯಾಗಬೇಕು ನೆಮ್ಮದಿಯಿಂದ ಬದುಕಬೇಕೆಂದು ಅಶಕ್ತರ ಪರವಾಗಿ ಕೆಲಸ ಮಾಡಿದವರು. ಸ್ವಾಭಿಮಾನ, ಸ್ವಾರ್ಥ ಎಂಬುದನ್ನ ಬಿಟ್ಟು ಬಡವರ



ಮನೆ ಬಾಗಿಲಿಗೆ ಹೋಗಿ ಆರೋಗ್ಯ ಭಾಗ್ಯ ಕರುಣಿಸುತ್ತಿದ್ದಾರೆ. ಮನುಷ್ಯ ಹುಟ್ಟಿದ ಮೇಲೆ ಒಂದು ಒಳ್ಳೆ ಕೆಲಸ ಮಾಡಬೆಕು, ನಮ್ಮ ಕೆಲಸ ನಮ್ಮ ಹೆಸರನ್ನ ಹೇಳುವಂತಿರಬೇಕೆಂದು ಸದಾ ಸಮಾಜ ಸೇವೆಯಲ್ಲಿ ತೊಡಗಿಕೊಂಡವರು



ಶ್ರೀಮತಿ ಡಾ.ಪ್ರಭಾ ಮಲ್ಲಿಕಾರ್ಜುನ ಅವರು.

ಬಡವರು, ರೈತರೆಂದರೆ ಪ್ರೀತಿ, ಅಪಾರ ಕಾಳಜಿ. ಮಾನವೀಯತೆಯ ಪ್ರತಿರೂಪ, ಬಾಯಿ ಮಾತಿನಲ್ಲಿ ಸಾಂತ್ವನ ಹೇಳದೇ ಬಡವರ ಹಸಿವು ನೀಗಿಸಿ ನೆಮ್ಮದಿ ನಗು ಅರಳಿಸಿದ ತಾಯಿ ಇವರು.

ತಮ್ಮ ಮನೆಗೆ ಅನಾರೋಗ್ಯದಿಂದ ಬಂದ ಎಷ್ಟೋ ಜನರಿಗೆ ಉಚಿತ ಚಿಕಿತ್ಸೆ ನೀಡಿ ಮರುಜನ್ಮ ನೀಡಿದವರು. ಕೊರೊನಾ ಸಂದರ್ಭದಲ್ಲಿ ಕೋರನಾ ವಾರಿಯರ್ಸ್ ಸೇರಿ ಸಾವಿರಾರು ಬಡವರಿಗೆ ಸಹಾಯ ಮಾಡಿದವರು.

ವಿವಿಧತೆಯಲ್ಲಿ ಏಕತೆ ನಮ್ಮ ದೇಶದ ಸಂಸ್ಕೃತಿ ಎಂಬಂತೆ ಜಾತಿ, ಧರ್ಮ, ಬಡತನ, ಸಿರಿತನಕ್ಕಿಂತ ಸ್ನೇಹ, ಪ್ರೀತಿ ತೋರಿದ ಜನಮನ ಗೆದ್ದವರು ಇವರು. ಎಷ್ಟೋ ಮಕ್ಕಳ ವಿದ್ಯಾಭ್ಯಾಸಕ್ಕೆ ಕೈಲಾದ ಸಹಾಯ ಮಾಡಿದವರು. ಇದೆಲ್ಲದರ ನಡುವೆ ಸಚಿವರಾದ ಎಸ್ ಎಸ್ ಮಲ್ಲಿಕಾರ್ಜುನ್ ಅವರಿಗೆ ಸದಾ ಬೆಂಬಲವಾಗಿ ನಿಂತು ಕುಟುಂಬದಲ್ಲೂ ಸಂತೋಷವಾಗಿ ಎಲ್ಲವನ್ನೂ ನಿಭಾಯಿಸಿಕೊಂಡು ಹೋಗುತ್ತಿದ್ದು ಒಂದು ಹೆಣ್ಣು ಸಮಾಜ ಹಾಗೂ ಕುಟುಂಬ ಎಲ್ಲ ಕಡೆ ಶಕ್ತಿಯಂತೆ ಇರಬಹುದೆಂದು ತೋರಿಸಿಕೊಟ್ಟ ಮಾದರಿ ಮಹಿಳೆ ಎಸ್ ಎಸ್ ಕೇರ್ ಟ್ರಸ್ಟ್ ನ ಲೈಫ್ ಟ್ರಸ್ಟಿ ಶ್ರೀಮತಿ ಡಾ. ಪ್ರಭಾ ಮಲ್ಲಿಕಾರ್ಜುನ ಇವರ ಹುಟ್ಟುಹಬ್ಬ ಹಿನ್ನೆಲೆ ಮಾದರಿ ಹೆಣ್ಣಾದ ಮಹಾತಾಯಿಗೆ ಮತ್ತೊಮ್ಮೆ ಮೊಗದೊಮ್ಮೆ ಎಸ್. ಎಸ್ ಮಲ್ಲಿಕಾರ್ಜುನ್ ರವರ ಪಿ. ಆರ್ ತಂಡದಿಂದ ಹುಟ್ಟು ಹಬ್ಬದ ಶುಭಾಷಯಗಳು.

## ಪ್ರಮುಖ ಸುದ್ದಿ

### ರಾಜ್ಯದಲ್ಲಿ ಅಭಿವೃದ್ಧಿಪರ ಸರ್ಕಾರ ಆಡಳಿತ: ಶಾಸಕ ಎನ್.ವೈ.ಗೋಪಾಲಕೃಷ್ಣ.

# ಕ್ಷೇತ್ರದ ಅಭಿವೃದ್ಧಿ ಕಾಮಗಾರಿಗಳಿಗೆ ಹೆಚ್ಚು ಆದ್ಯತೆ

» **ಚಳ್ಳಕೆರೆ**

ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ಗ್ರಾಮೀಣ ಭಾಗದ ಅಭಿವೃದ್ದಿಗೆ ಹೆಚ್ಚು ಒತ್ತು ನೀಡುತ್ತಾ ಬಂದಿದೆ. ರಾಜ್ಯದ ಕೋಟ್ಯಾಂತರ ಜನ ಬಡವರು ಸರ್ಕಾರ ಹಲವಾರು ಯೋಜನೆಗಳ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ. ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಹೆಚ್ಚು ಅಭಿವೃದ್ದಿ ಕಾಣುವ ಎಲ್ಲಾ ಅವಕಾಶಗಳು ಇವೆ ಎಂದು ಮೊಳಕಾಲ್ಮೂರು ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ತಿಳಿಸಿದರು.



ಅವರು, ಗುರುವಾರ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಚಳ್ಳಕೆರೆ ತಾಲ್ಲೂಕಿನ ಹಿರೇಹಳ್ಳಿ ಗೌರಸಮುದ್ರ–7.70ಕಿ.ಮೀ ಉದ್ದದ ರಸ್ತೆ ನಿರ್ಮಾಣಕ್ಕೆ 5 ಕೋಟಿ, ತಳಕು ದೊಡ್ಡ ಉಳ್ಳಾರ್ತಿ 4.10 ಕಿ.ಮೀ ರಸ್ತೆ ನಿರ್ಮಾಣಕ್ಕೆ 4.50 ಕೋಟಿ, ಚೌಳಕೆರೆ, ಮುತ್ತಿಗಾರಹಳ್ಳಿ ರಸ್ತೆಗೆ 2 ಕೋಟಿ ಒಟ್ಟು 11.50 ಕೋಟಿ ವೆಚ್ಚದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಗುತ್ತಿಗೆದಾರರಿಗೆ ನಿರ್ದೇಶನ ನೀಡಿದ ಶಾಸಕರು ಯಾವುದೇ ಕಾರಣಕ್ಕೂ ಕಾಮಗಾರಿಯ ಮುಖಮಟ್ಟ ಕುಸಿತವಾಗದಂತೆ ಎಚ್ಚರಿಕೆ ವಹಿಸಿ ಎಂದರು. ಗೌರಸಮುದ್ರ ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣ, ಹಿರೇಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರಾಜಣ್ಣ, ಉಪಾಧ್ಯಕ್ಷ ರವಿಕುಮಾರ್, ಸದಸ್ಯರಾದ ಮಲ್ಲಿಕಾರ್ಜುನ್,ಗೋಪಾಲಪ್ಪ, ಸಂಜಯ್‌ಗೌಡ, ಕೆ.ಓ.ಬಾಬು, ಎಂ.ಚಂದ್ರಣ್ಣ, ಪಿಡಿಓ ಹನುಮಂತರಾಜು, ಲೋಕೋಪಯೋಗಿ ಎಇಇ ವಿಜಯಭಾಸ್ಕರ್, ಪಂಚಾಯಿತಿ ಇಂಜಿನಿಯರಿಂಗ್ ಎನ್.ಕಾವ್ಯ, ಮುಖಂಡರಾದ ಸೂರನಾಯಕ, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T